ಸಂಪುಟ : 9 ಸಂಚಿಕೆ 211 ಪುಟ : 4 ಬೆಲೆ: 3.00 ರವಿವಾರ ಸೆಪ್ಟೆಂಬರ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 211 Pages : 4 Price : 3.00 Sunday september 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್-29 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳು ವಿವರ : ವಾರ್ಡ್ ನಂ. 22 ಗಂಗಿಮಡಿ, ಶುದ್ಧ ನೀರಿನ ಘಟಕದ ಲೈನ್ 1 ರಿಂದ 5 ಲೈನ್‌ಗಳು, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 11, 12 ಕಾಶಿ ವಿಶ್ವನಾಥ ಗುಡಿ, ಹನುಮಂತ ದೇವರ ಗುಡಿ ಲೈನ್, ಗಾಣಿಗೇರ ಭವನ, ಗಣಪತಿ ಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 13 ಕಾರ್ಕಳ ಲೈನ್, ಗುಳೇದವರ ಲೈನ್, ಗೂಟೂರ ಲೈನ್, ಹಾಸ್ಟೆಲ್ ಲೈನ್, ಇಟಗಿ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ.4 ಟರ್ನಲ್ ಪೇಟೆ, ಬ್ಯಾಳಿಯವರ ಲೈನ್, ಮಂಜುನಾಥ ನಗರ, ಸುಣ್ಣದ ಭಟ್ಟಿ , 200 ಮನೆ , 270 ಮನೆ , ಕಣವಿ ಪ್ಲಾಟ್, ಬಿ ಎಸ್ ಎನ್ ಎಲ್ ಆಫೀಸ್, ಹಳೆ ಪೋಸ್ಟ್ ಆಫೀಸ್, ಗಾರ್ಡನ್ ಲೈನ್, ಗೌರಿ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20, 25, 19 ಬೇವಿನ ಮರದಮ್ಮ, ಎಸ್ ಟಿ ಡಿ, ಕೊಟ್ಟೂರು, ಹುಲಿಗೆಮ್ಮನ ಗುಡಿ, ಗೌಳಿಯವರ, ಕೆರಕಲಮಟ್ಟಿ, ಕಲಬಂಡಿಯವರ, ಪಲ್ಲೇದವರ ಲೈನ್ ಗಳು, ಸಿ ಟಿ ಹಾಲ್- ಭಾಗ -1,2 , ಸೋಮೇಶ್ವರ ಗುಡಿ, 2 ನಂ ಶಾಲೆ, ಶರೀಫಜ್ಜನ ಗದ್ದುಗೆ, ಖಾನ ತೋಟ ಉಳಿದ ಕೆಲವು ಭಾಗಗಳು. ವಾರ್ಡ್ ನಂ 7, 5 ಶಿವಾಜಿ ನಗರ, ಪಂಚಲಕ್ಷ್ಮಿ ಬಡಾವಣೆ, ಬಸವೇಶ್ವರ ನಗರ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸ್ತೆ ಕಾಮಗಾರಿಗೆ ಭೂಮಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಎಸ್ ಪಿ ಕಚೇರಿಯಿಂದ ಎಪಿಎಂಸಿ ಮುಖ್ಯ ರಸ್ತೆವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಭೂಮಿ ಪೂಜೆ ನೇರವರಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ಬಿ ಬಿ ಅಸೂಟಿ, ಎಸ್ ಎನ್ ಬಳ್ಳಾರಿ, ಸಿದ್ದು ಪಾಟೀಲ, ಅಶೋಕ ಮಂದಾಲಿ ಹಾಗೂ ಗಣ್ಯರು ಹಾಜರಿದ್ದರು.

### ಗದಗ ಜಿಲ್ಲಾ ಗುರುಭವನದ ಭೂಮಿ ಪೂಜೆ, ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಶೈಕ್ಷಣಿಕ ಸಮ್ಮೇಳನ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ

# ಸರ್ಕಾರಿ ಶಾಲೆಗಳನ್ನು ಕೇವಲವಾಗಿ ಕಾಣದಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಮಕ್ಕಳನ್ನೇ ಆಸ್ತಿ ಮಾಡಿ ದೇಶಕ್ಕೆ ಕೊಡುಗೆಯಾಗಿ ನೀಡಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಶನಿವಾರ ಜಿಲ್ಲಾ ಗುರು ಭವನದ ಭೂಮಿ ಪೂಜೆ ಮತ್ತು ಸರಕಾರಿ ಪ್ರಾಥಮಿಕ ಶಿಕ್ಷಕರ ಶೈಕ್ಷಣಿಕ ಸಮ್ಮೇಳನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಸರ್ಕಾರಿ ಶಾಲೆಗಳಲ್ಲಿ ಬಡ ವಿದ್ಯಾರ್ಥಿಗಳು ಶಿಕ್ಷಣ ಅರಸಿ ಬರುತ್ತಾರೆ. ಅವರನ್ನು ಶಿಕ್ಷಕರು ತಮ್ಮ ಮಕ್ಕಳೆಂದೇ ತಿಳಿದು ಉತ್ತಮ ಶಿಕ್ಷಣ ನೀಡಬೇಕು. ಕೆಲವರು ಕೇವಲ ನಗರದ ಮಕ್ಕಳು ಬೌದ್ಧಿಕವಾಗಿ ಮುಂದೆ ಇರುತ್ತಾರೆ ಎನ್ನುತ್ತಾರೆ ಮತ್ತು ಹಿಂದಿನ ಶ್ರೇಣೀಕೃತ ವ್ಯವಸ್ಥೆಯಲ್ಲಿ ಉನ್ನತ ಸಮುದಾಯದವರು ಮಾತ್ರ ಶಿಕ್ಷಣ ಪಡೆದು ಉತ್ತಮ ಅಂಕ



> ಅಂಬೇಡ್ಕರರು ಹೇಳಿದಂತೆ ಮಕ್ಕಳಿಗೆ ಶಿಕ್ಷಣ ಅತ್ಯವಶ್ಯಕ. ಅವರನ್ನು ಕೇವಲ ಆರ್ಟಿಕಲ್ ಸಂವಿಧಾನಕ್ಕೆ ಸೀಮಿತಗೊಳಿಸದೇ ಅವರ ಮಾರ್ಗದರ್ಶನವನ್ನು ನಾವೆಲ್ಲರೂ ಪಾಲಿಸಿ, ಎಲ್ಲಾ ಶಿಕ್ಷಕರು ಆನಂದಿಂದ ತಮ್ಮನ್ನು ತಾವು ಮಕ್ಕಳ ಜ್ಞಾನದ ಒಕ್ಕಲುತನ ಕಾರ್ಯದಲ್ಲಿ ತೊಡಗಿಸಿಕೊಳ್ಳಿ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ಗಳಿಸುತ್ತಾರೆ ಎಂಬುವುದಿತ್ತು. ಆದರೆ ಈಗ ಕಾಲ ಬದಲಾಗಿದೆ. ಶೋಷಿತ ವರ್ಗ ಎಂದು ಗುರುತಿಸಿಕೊಂಡವರು ಸಹ ಉತ್ತಮ ಅಂಕಗಳನ್ನು ಪಡೆಯುತ್ತಿದ್ದಾರೆ. ಅದೇ ರೀತಿ ಗ್ರಾಮೀಣ ಮಕ್ಕಳಲ್ಲಿಯೂ ಎಲ್ಲಾ ರೀತಿಯ ಬೌದ್ಧಿಕ ಪ್ರತಿಭೆ, ಚಾಣಾಕ್ಷತನಕ್ಕೆ ಕೊರತೆಯಿಲ್ಲ. ಸರ್ಕಾರಿ ಶಾಲೆಗಳು ಎಂದರೆ ಕೇವಲವಾಗಿ ಕಾಣದೇ

> ಹಲವರ ಸತತ ಪ್ರಯತ್ನದಿಂದ ಇಂದು ನಗರದ ಆದರ್ಶ ಕಾಲೋನಿಯಲ್ಲಿ ಗುರುಭವನಕ್ಕೆ ಭೂಮಿ ಪೂಜೆ ಸಲ್ಲಿಸಲಾಗಿದೆ. ಈ ಗುರುಭವನವು ಕೇವಲ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಸಂಬಂಧಿಸಿದ್ದಲ್ಲದೆ, ಎಲ್ಲಾ ಶಿಕ್ಷಕರಿಗೆ ಸೇರಿದ್ದು. ಇದನ್ನು ಕೇವಲ ಮದುವೆ ಸಮಾರಂಭಗಳಿಗೆ ಉಪಯೋಗಿಸಲು ಸೀಮಿತಗೊಳಿಸದೆ, ಗುರುಭವನದಲ್ಲಿ ಎಲ್ಲರಿಗೂ ಓದಲು ಡಿಜಿಟಲ್ ಗ್ರಂಥಾಲಯ ನಿರ್ಮಾಣವಾಗಿ, ಮಾದರಿ ಗುರುಭವನ ತಲೆ ಎತ್ತಿ ನಿಲ್ಲಬೇಕು ಎಂದು ಸಚಿವ ಎಚ್.ಕೆ. ಪಾಟೀಲ ನುಡಿದರು.

ಅಸುಂಡಿ, ಹೊಸಳ್ಳಿ, ಹುಲಕೋಟಿ ಗ್ರಾಮದ ಸರ್ಕಾರಿ ಶಾಲೆಯ ಗುಣಮಟ್ಟದಂತೆ ಎಲ್ಲಾ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ತಿಳಿಸಿದರು.

ಗದಗ ಜಿಲ್ಲೆಯೂ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಕಳೆದ ವರ್ಷದ 26ನೇ ಸ್ಥಾನದಿಂದ ಈ ವರ್ಷ 15ನೇ ಸ್ಥಾನಕ್ಕೆ ಬಂದಿದೆ. ಅದೇ ರೀತಿ ಪಿಯುಸಿಯ ಫಲಿತಾಂಶವನ್ನು ಸುಧಾರಿಸಲು ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡಿ ಎಂದು ನುಡಿದರು.

ಶಾಲೆಯಲ್ಲಿ ಶೋಷಣೆ ಮುಕ್ತ ವಾತಾವರಣ ನಿರ್ಮಾಣವಾಗಬೇಕು. ಇದರಿಂದ ಎಲ್ಲರಿಗೂ ಸ್ವಾಭಿಮಾನ ತರಬೇಕು. ಅಂದಾಗ ಮಾತ್ರ ಈ ಶೈಕ್ಷಣಿಕ ಸಮ್ಮೇಳನ ಸಾರ್ಥಕ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಾಧಕ ಶಿಕ್ಷಕ-ಶಿಕ್ಷಕಿಯರಿಗೆ ಸನ್ಮಾನ, ಉತ್ತಮ ಶಾಲೆಗಳಿಗೆ ಪ್ರಶಸ್ತಿ ಪ್ರದಾನ ಮತ್ತು ಸರಕಾರಿ ಪ್ರಾಥಮಿಕ ಶಾಲೆಗಳ ಸಬಲೀಕರಣ ಕುರಿತು ಕಾರ್ಯಾಗಾರ ಮತ್ತು ಅಭಿನಂದನಾ ಸಮಾರಂಭ ನೆರವೇರಿತು.

ಕಾರ್ಯಕ್ರಮದಲ್ಲಿ ಅಕ್ಬರ್ ಸಾಬ ಬಬರ್ಚಿ, ಬಿ.ಬಿ. ಅಸೂಟಿ, ಎಸ್.ಎನ್. ಬಳ್ಳಾರಿ, ಸಿದ್ದು ಪಾಟೀಲ, ಅಶೋಕ ಮಂದಾಲಿ, ಪ್ರಭು ಬುರಬುರೆ, ಎಂ.ಎ. ರಡ್ಡೇರ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎಸ್. ಬುರಡಿ, ಬಸಲಿಂಗಪ್ಪ ಹಾಜರಿದ್ದರು. ಕಾರ್ಯಕ್ರಮವನ್ನು ಎ.ಎಂ. ಹೀರೆಮಠ ನಿರ್ವಹಿಸಿದರು.

### ತಾಲೂಕಾ ಮಟ್ಟದ ಪೂರಕ ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

# ಉತ್ತಮ ವಿದ್ಯಾಭ್ಯಾಸದೊಂದಿಗೆ ಯಶಸ್ಸು ಸಾಧಿಸಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿ ಬಡ ಮಗುವೂ ಉತ್ತಮ ಆರೋಗ್ಯ ಹೊಂದಲು ಮೊಟ್ಟೆ, ರಾಗಿ ಮಾಲ್ಟ್, ಹಾಲು ವಿತರಿಸುವುದಲ್ಲದೆ, ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲದಂತೆ ಉತ್ತಮ ಬಟ್ಟೆ, ಶೂ-ಸಾಕ್ಸ್ ಕೊಡುವ ಕೆಲಸವನ್ನು ಸರಕಾರ ಮಾಡುತ್ತಿದೆ ಎಂದು ಶಾಸಕ ಜಿ.ಎಸ್. ಪಾಟೀಲ್ ಹೇಳಿದರು.

ಡಂಬಳ ಗ್ರಾಮದ ಸರಕಾರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಗ್ರಾಮ ಪಂಚಾಯಿತಿ ಡಂಬಳ, ಅಕ್ಷರ ದಾಸೋಹ, ಶ್ರೀಅಜೀಂ ಪ್ರೇಮಜೀ ಫೌಂಡೇಶನ್ ಫಾರ್ ಡೆವಲಪ್‌ಮೆಂಟ್ ಇವರ ಸಂಯುಕ್ತ ಆಶ್ರಯದಲ್ಲಿ ತಾಲೂಕಾ ಮಟ್ಟದ ಪೂರಕ ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ವಿಪ್ರೋ ಸಂಸ್ಥೆಯ ಸಂಸ್ಥಾಪಕರಾದ



ಅಜೀಂ ಪ್ರೇಮಜಿಯವರು ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಕಷ್ಟು ಸೇವಾ ಕಾರ್ಯ ಮಾಡಿದ್ದಾರೆ. ದೇಶಕ್ಕೆ ಅವರ ಕೊಡುಗೆ ಅಪಾರ. ಮೊದಲು ನಮ್ಮ ಸರಕಾರ ವಾರದಲ್ಲಿ 2 ದಿನ ಮೊಟ್ಟೆ ವಿತರಿಸುತಿತ್ತು. ಈಗ 6 ದಿನಗಳ ಕಾಲ ಈ ಕಾರ್ಯ ಜರುಗಲಿದೆ. ಮೊಟ್ಟೆ ತಿನ್ನದೆ ಇರುವ ಮಕ್ಕಳಿಗೆ ಬಾಳೆಹಣ್ಣು, ಚಿಕ್ಕಿ ವಿತರಿಸುವ ಕಾರ್ಯ ನಡೆಯಲಿದೆ. ಮಕ್ಕಳು ಪೌಷ್ಟಿಕ ಆಹಾರ ಸೇವಿಸಿ ತಮ್ಮ ಆರೋಗ್ಯವನ್ನು ಕಾಪಾಡಿಕೊಂಡು ಚೆನ್ನಾಗಿ ವಿದ್ಯಾಭ್ಯಾಸ ಮಾಡಿ ಜೀವನದಲ್ಲಿ ಯಶಸ್ಸನ್ನು ಸಾಧಿಸಬೇಕೆಂದು ಹೇಳಿದರು.

ಗೋಣಿಬಸಪ್ಪ ಕೊರ್ಲಹಳ್ಳಿ ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಮ್. ಫಡ್ನೀಸ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಡಿಎಮ್‌ಸಿ ಅಧ್ಯಕ್ಷ ಕರಿಯಪ್ಪ ಕರಿಗಾರ, ಶ್ರೀದೇವಿ ಹಿರೇಮಠ, ತಹಸೀಲ್ದಾರ ಎರಿಸ್ವಾಮಿ ಪಿ.ಎಸ್, ಇಒ ವಿಶ್ವನಾಥ ಹೊಸಮನಿ, ವಿ.ಬಿ. ಸೋಮನಕಟ್ಟಿಮಠ, ವಿ.ಎಸ್. ಯರಾಶಿ, ಬಸುರಾಜ ಪೂಜಾರ, ಬಸುರಡ್ಡಿ ಬಂಡಿಹಾಳ, ಹಾಲಪ್ಪ ಹರ್ತಿ, ಬಾಬುಸಾಬ ಮೂಲಿಮನಿ, ವಿರೂಪಾಕ್ಷಪ್ಪ ಲಕ್ಕುಂಡಿ, ಸೋಮಣ್ಣ ಗುಡ್ಡದ, ಮರಿಯಪ್ಪ ಸಿದ್ದಣ್ಣವರ, ಜಾಕೀರ ಮೂಲಿಮನಿ, ಮಹೇಶ ಗಡಗಿ, ಅಶೋಕ ಹಡಪದ, ಸಿದ್ದಪ್ಪ ಹಡಪದ, ಬಾಬುಸಾಬ ಸರಕಾವಾಸ, ಯಲ್ಲಪ್ಪಗೌಡ ಕರಮುಡಿ, ಹುಸೇನಸಾಬ ಹೊಸಬಾವಿ, ಅಕ್ಷರದಾಸೋಹ ಅಧಿಕಾರಿ ಎಸ್. ವಾಯ್. ವಿಭೂತಿ, ಗಂಗಾಧರ ಅಣ್ಣಿಗೇರಿ, ಸಿಆರ್‌ಪಿ ಮೃತುಂಜಯ್ಯ ಪೂಜಾರ, ಮುಖ್ಯೋಪಾಧ್ಯಾಯ ಬಾಪುಗೌಡ ಪಾಟೀಲ, ಕೆಜಿಬಿ ಮುಖ್ಯೋಪಾಧ್ಯಾಯ ಎಸ್.ಬಿ. ಅಬ್ಬಿಗೇರಿ, ಎಮ್.ಜೆ. ಕಾಸ್ತರ, ಮೈಲಾರಪ್ಪ ಅರೆಕಲ್ಲ, ಎಸ್‌ಡಿಎಮ್‌ಸಿ ಸದಸ್ಯರು, ಗುರುವೃಂದ, ಅಡುಗೆ ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು.

> ಶಿಕ್ಷಕರು ಈಗಾಗಲೇ ಬಿಸಿ ಊಟ, ರಾಗಿ ಮಾಲ್ಟ್, ಮೊಟ್ಟೆ, ಹಾಲು ವಿತರಣೆಯ ಕಾರ್ಯವನ್ನು ಜವಾಬ್ದಾರಿಯಿಂದ ಮಾಡುತ್ತಾ ಬರುತ್ತಿದ್ದು, ಶ್ರೀಅಜೀಂ ಪ್ರೇಮಜೀ ಫೌಂಡೇಶನ್ ಕೊಡಮಾಡಿರುವ 1500 ಕೋಟಿ ಹಣದ ಯೋಜನೆಯನ್ನು ಗುರುವೃಂದ ಯಶಸ್ವಿಯಾಗಿ ನಿರ್ವಹಿಸಬೇಕೆಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

### ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ-2024 ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ


# ಕ್ರೀಡಾಳುಗಳು ಜಿಲ್ಲೆಯ ಅಭಿಮಾನ ಹೆಚ್ಚಿಸಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡಾಪಟುಗಳಿಗೆ ಗೆಲವು ಮಾತ್ರ ಮುಖ್ಯವಲ್ಲ. ಕ್ರೀಡಾ ಮನೋಭಾವದಿಂದ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರುಗಳ ಸಹಯೋಗದಲ್ಲಿ ಜರುಗಿದ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಏರ್ಪಡಿಸಿದ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವು ಸಮಾಧಾನಕರ ವಾತಾವರಣದಲ್ಲಿ ನಡೆಯುತ್ತಿದೆ. ಜಿಲ್ಲೆಯ ಆಶಾಕಿರಣವಾಗಿರುವ ಕ್ರೀಡಾಪಟುಗಳು ಕ್ರೀಡೆಯಲ್ಲಿ ಉತ್ತಮ ಪ್ರದರ್ಶನ ನೀಡಿ ಪದಕವನ್ನು ಗಳಿಸಿ ಜಿಲ್ಲೆಯ ಜನತೆ ಅಭಿಮಾನ



ಪಡುವ ಹಾಗೆ ಯುವ ಪೀಳಿಗೆ ನಡೆದುಕೊಳ್ಳುತ್ತಿದೆ ಎಂದರು.

ಗದಗ ಜಿಲ್ಲೆಯ ಅಂತಾರಾಷ್ಟ್ರೀಯ ಮಟ್ಟದ ಸೈಕ್ಲಿಂಗ್ ಕ್ರೀಡಾಪಟು ಪವಿತ್ರಾ ಕುರ್ತಕೋಟಿ, ರಾಷ್ಟ್ರೀಯ ಮಟ್ಟದಲ್ಲಿ ಬೆಳ್ಳಿ ಪದಕ ವಿಜೇತರಾದ ಕರೆಪ್ಪ ಹೆಗಡೆ, ಸ್ಟ್ಯಾಲಿನ್ ಗೌಡರ, ಕುಸ್ತಿ ಕ್ರೀಡೆಯ ರಾಷ್ಟ್ರೀಯ ಕ್ರೀಡಾಪಟುಗಳಾದ ತೇಜಸ್ವಿನಿ ಬಿಂಗಿ, ಕಾವ್ಯಾ ಜಾಧವ, ಆರೀಫಾ ಕುಕನೂರ, ಖೇಲೊ ಇಂಡಿಯಾದಲ್ಲಿ ಕಂಚಿನ ಪದಕ ಪಡೆದ ಭುವನೇಶ್ವರಿ ಕೊಳಿವಾಡ, ರಾಹುಲ ಸಿದ್ದಮ್ಮನಹಳ್ಳಿ, ಹಾಕಿ ಮಿನಿ ಒಲಂಪಿಕ್‌ನಲ್ಲಿ ಬೆಳ್ಳಿ ಪದಕ ಪಡೆದ ಸುಜಲ ಕೊರವರ, ಗೋವಿಂದಪ್ಪ, ಮಲ್ಲು, ದಕ್ಷಿಣ ವಲದಲ್ಲಿ ಬಂಗಾರದ ಪದಕ ಪಡೆದ ಅಖಿಲ ಮುಟಗಾರ, ಆದಿತ್ಯ ಮುಟಗಾರ, ನೇಹಾ ಮುಟಗಾರ ಹೀಗೆ ವಿವಿಧ ಕ್ರಿಡಾಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಪ್ರದರ್ಶನ ನೀಡಿ ಗದಗ ಜಿಲ್ಲೆಗೆ ಹೆಸರನ್ನು ತಂದಿದ್ದು ಹೆಮ್ಮೆಯ ವಿಷಯ. ಜಿಲ್ಲೆಯಲ್ಲಿರುವ ಕ್ರೀಡಾ ಸೌಕರ್ಯಗಳ ಸದುಪಯೋಗ ಪಡೆದು, ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಹಾಕಿ ತಂಡದಲ್ಲಿ ಭಾಗವಹಿಸುವಲ್ಲಿ ಪ್ರಯತ್ನ ಮಾಡಿ ಎಂದರು.

> ಕ್ರೀಡಾಪಟುಗಳ ಆಟದ ಸಾಮರ್ಥ್ಯದಿಂದ ಕ್ರೀಡಾ ಕ್ಷೇತ್ರದಲ್ಲಿ ಎತ್ತರಕ್ಕೇರಲು ಬೇಕಾದ ಸೌಕರ್ಯಗಳನ್ನು 2 ಕೋಟಿ ವೆಚ್ಚದಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ಪುಟ್ಬಾಲ್ ಟರ್ಫ್ ಮೈದಾನ, ಫ್ಲಡ್ ಲೈಟ್ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿ ಮತ್ತು ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ವುಡನ್ ಪ್ಲೋರಿಂಗ್ ಲೈಟಿಂಗ್, ಮುಳಗುಂದ ಪಟ್ಟಣದಲ್ಲಿ ಈಜುಗೊಳ ನಿರ್ಮಾಣ ಕಾಮಗಾರಿ ಆದಷ್ಟು ಬೇಗನೆ ಪ್ರಾರಂಭಗೊಳ್ಳುತ್ತವೆ ಎಂದು ಸಚಿವ ಎಚ್. ಕೆ. ಪಾಟೀಲ ನುಡಿದರು.

ವಿವಿಧ ಜಿಲ್ಲೆಗಳಿಂದ ವಿಭಾಗ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ಆಗಮಿಸಿದ ಎಲ್ಲಾ ಕ್ರೀಡಾಪಟುಗಳು, ಕ್ರೀಡಾ ಮನೋಭಾವದಿಂದ ಆಟ ಆಡಬೇಕೆಂದು ಎಲ್ಲಾ ಕ್ರೀಡಾಪಟುಗಳಿಗೆ ಶುಭ ಕೋರಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸ್ವಾಗತಿಸಿ ಮಾತನಾಡಿ, ಜಿಲ್ಲೆಯ ಮಹತ್ಮ ಗಾಂಧಿ ಕ್ರೀಡಾಂಗಣದಲ್ಲಿ ಹಾಕಿ ಕ್ರೀಡಾಂಗಣ, ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಪುಟ್ಬಾಲ್ ಮತ್ತು ಒಳಾಂಗಣ ಕ್ರೀಡಾಂಗಣದಲ್ಲಿ ಕಬ್ಬಡ್ಡಿ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಬಿ.ಬಿ. ಅಸೂಟಿ, ಸಿದ್ದು ಪಾಟೀಲ, ಎಂ.ಸಿ. ಶೇಖ್, ಅಶೋಕ ಮಂದಾಲಿ ಉಪಸ್ಥಿತರಿದ್ದರು. ವೆಂಕಟೇಶ ಆಲ್ಕೊಡ ತಂಡದವರು ಸಂಗೀತ ಪ್ರಸ್ತುತಪಡಿಸಿದರು. ಕಾರ್ಯಕ್ರಮವನ್ನು ಬಾಹುಬಲಿ ಜೈನ್ ನಿರ್ವಹಿಸಿದರು.

### ಎಸ್.ಆರ್. ಪಾಟೀಲ ಸರಕಾರಿ ಮಾದರಿ ಕೇಂದ್ರ ಶಾಲೆಯ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

# ಮಕ್ಕಳ ಸಂಖ್ಯೆ ವೃದ್ಧಿಸಲು ಕ್ರಮ ಕೈಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ರೋಣ

ಪ'ಟ್ಟಣ'ದ'ಲ್ಲಿ'ರ'ು'ವ' ಗುರುಭವನದ ಮೇಲ್ಮಹಡಿ ನಿರ್ಮಾಣಕ್ಕೆ ಈಗಾಗಲೇ 20 ಲಕ್ಷ ರೂಗಳ ಅನುದಾನವನ್ನು ನೀಡಲಾಗಿದ್ದು, ಈಗ ಮತ್ತೆ 1 ಕೋಟಿ ರೂಗಳ ಅನುದಾನವನ್ನು ಒದಗಿಸಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಎಸ್. ಆರ್. ಪಾಟೀಲ ಸರಕಾರಿ ಮಾದರಿ ಕೇಂದ್ರ ಶಾಲೆಯಲ್ಲಿ ಸರಕಾರ ಹಾಗೂ ಅಜೀಂ ಪ್ರೇಮಜಿ ಫೌಂಡೇಶನ್ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳಿಗೆ ಶಾಲಾ ಅವಧಿಯ 6 ದಿನಗಳಲ್ಲಿಯೂ ಮೊಟ್ಟೆ, ಬಾಳೆಹಣ್ಣು, ಶೇಂಗಾ ಚಿಕ್ಕಿ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ಹಿಂದೆ ವಾರದಲ್ಲಿ ಎರಡು ದಿನ ಮಾತ್ರ ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ವಿತರಿಸಲಾಗುತ್ತಿತ್ತು. ಈಗ ಅಜೀಂ ಪ್ರೇಮ್‌ಜೀಯವರು ಯಾವ ಮಕ್ಕಳೂ ಅಪೌಷ್ಟಿಕತೆಯಿಂದ ಬಳಲಬಾರದು ಎಂಬ ಉದ್ದೇಶದಿಂದ ಶಾಲಾ ಅವಧಿಯ 6 ದಿನಗಳು ಮೊಟ್ಟೆ, ಬಾಳೆಹಣ್ಣು,



> ಗುರುಗಳ ಹಿತವನ್ನು ಕಾಯುವುದು ಜನಪ್ರತಿನಿಧಿಗಳ ಆದ್ಯ ಕರ್ತವ್ಯ. ಗುರುಗಳನ್ನು ಗೌರವಿಸಿದಾಗ ಮಾತ್ರ ಸಮಾಜದಲ್ಲಿ ಪ್ರಗತಿ ಸಾಧಿಸಲು ಸಾಧ್ಯ. ಗುರುಭವನದ ಮೇಲ್ಮಹಡಿ ನಿರ್ಮಾಣಕ್ಕೆ 1 ಕೋಟಿ ರೂಗಳ ಅನುದಾನವನ್ನು ಒದಗಿಸಲಾಗಿದೆ. ಗುರುಗಳು ಸಹ ಸರಕಾರಿ ಶಾಲೆಯಲ್ಲಿ ಮಕ್ಕಳ ಸಂಖ್ಯೆಯನ್ನು ವೃದ್ಧಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಸರಕಾರಿ ಶಾಲೆಗಳ ಪ್ರಗತಿಗೆ ತಾವು ಎಲ್ಲ ರೀತಿಯಿಂದಲೂ ಸಹಕಾರ ನೀಡುವುದಾಗಿ ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

ಶೇಂಗಾ ಚಿಕ್ಕಿಯನ್ನು ಸೇವಿಸಲಿ ಎಂದು ಸರಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡು ಮಹತ್ವಪೂರ್ಣ ಕಾರ್ಯವನ್ನು ಜಾರಿಗೆ ತಂದಿರುವುದು ಸ್ವಾಗತರ್ಹವಾಗಿದೆ. ಮಕ್ಕಳು ಸಹ ಪೌಷ್ಟಿಕ ಆಹಾರವನ್ನು ಸೇವಿಸಿ ಗುಣಮಟ್ಟದ ಅಕ್ಷರ ಜ್ಞಾನವನ್ನು ಪಡೆಯಬೇಕು ಎಂದರು.

ಅಧ್ಯಕ್ಷತೆಯನ್ನು ಗದಿಗೆಪ್ಪ ಕಿರೇಸೂರ ವಹಿಸಿದ್ದರು. ಪುರಸಭೆಯ ಅಧ್ಯಕ್ಷೆ ಗೀತಾ ಮಾಡಲಗೇರಿ, ಸದಸ್ಯರಾದ ದಾವಲಸಾಬ ಬಾಡಿನ, ಸಂಗಪ್ಪ ಜಿಡ್ಡಿಬಾಗಿಲ, ರಂಗವ್ವ ಭಜಂತ್ರಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ,ಮುತ್ತಣ್ಣ ಸಂಗಳದ, ಬಸವರಾಜ ಜಗ್ಗಲ, ಅಸ್ಲಂ ಕೊಪ್ಪಳ, ಯಲ್ಲಪ್ಪ ಕಿರೇಸೂರ, ಬಿಇಒ ಆರ್.ಎನ್. ಹುರಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಂಪಾದಕೀಯ

# ಅವರವರ ನೈತಿಕತೆ ಪ್ರಶ್ನಿಸಿಕೊಳ್ಳಲಿ

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಹೈಕೋರ್ಟ್ ಆದೇಶ ನೀಡಿದ ಬೆನ್ನಲ್ಲೆ, ಎಫ್ ಐಆರ್ ದಾಖಲಾಗಿ ತನಿಖೆ ಚುರುಕು ಪಡೆದುಕೊಳ್ಳುವ ಹಂತದಲ್ಲಿದೆ. ಈ ಮಧ್ಯೆ ಕೇಂದ್ರ ವಿತ್ತ ಸಚಿವ ನಿರ್ಮಲಾ ಸೀತಾರಾಮನ್, ಬಿಜೆಪಿ ಹಿಂದಿನ ರಾಜ್ಯಾಧ್ಯಕ್ಷ ನಳೀನಕುಮಾರ್ ಕಟೀಲ್ , ಬಿ.ವೈ. ವಿಜಯೇಂದ್ರ ವಿರುದ್ಧವೂ ಎಫ್ ಐಆರ್ ದಾಖಲಾಗಿದೆ.

ಬಿಜೆಪಿಯ ಈ ನಾಯಕರು, ಚುನಾವಣೆ ಬಾಂಡ್ ಹೆಸರಿನಲ್ಲಿ 8 ಸಾವಿರ ಕೋಟಿ ರೂ. ಸುಲಿಗೆ ಮಾಡಿದ್ದಾರೆ. ಅವರ ವಿರುದ್ಧ ತನಿಖೆಗೆ ಅನುಮತಿ ನೀಡಬೇಕು ಎಂದು ಆದರ್ಶ ಅಯ್ಯರ್ ಎನ್ನುವವರು ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು. ದೂರುದಾರರ ಅರ್ಜಿ ಪುರಸ್ಕರಿಸಿ ಕೋರ್ಟ್ , ಎಫ್ ಐಆರ್ ದಾಖಲಿಸಲು ಅನುಮತಿ ನೀಡಿ, ವಿಚಾರಣೆಯನ್ನು ಅಕ್ಟೋಬರ್ 10ಕ್ಕೆ ನಿಗದಿಪಡಿಸಿದೆ.

ದೇಶದಲ್ಲಿ ಭಾರೀ ಸಂಚಲನ ಸೃಷ್ಟಿಸಿದ್ದ ಚುನಾವಣೆ ಬಾಂಡ್ ವಿಷಯ ಈಗ ಮತ್ತೊಮ್ಮೆ ಸಂಚಲನ ಸೃಷ್ಟಿಸಿದೆ. ಇದು ಪ್ರಕರಣ ಕರ್ನಾಟಕದಲ್ಲಿ ದಾಖಲಾದರೂ ಇಡೀ ದೇಶಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದೆ. ಕೇಂದ್ರ ಸರಕಾರ ಜಾರಿ ನಿರ್ದೇಶನಾಲಯವನ್ನು ಬಳಕೆ ಮಾಡಿಕೊಂಡು ದೇಶದ ಬಹುದೊಡ್ಡ ಕಾರ್ಪೋರೇಟ್ ಕಂಪನಿಗಳ ಮೇಲೆ ದಾಳಿ ನಡೆಸಿ, ಪ್ರಕರಣದಿಂದ ಪಾರಾಗಲು ಒತ್ತಾಯಪೂರ್ವಕವಾಗಿ ಪಕ್ಷಕ್ಕೆ ದೇಣಿಗೆ ಸಂಗ್ರಹಿಸುವ ವ್ಯವಸ್ಥೆಯೇ ಚುನಾವಣೆ ಬಾಂಡ್ ಆಗಿದೆ.

ರಾಜಕೀಯ ಪಕ್ಷಗಳಿಗೆ ಹರಿದು ಬರುತ್ತಿದ್ದ ಕಪ್ಪು ಹಣವನ್ನು ತಡೆಯುವ ಉದ್ದೇಶಕ್ಕಾಗಿ ಈ ಚುನಾವಣೆ ಬಾಂಡ್ ಜಾರಿಗೆ ತರಲಾಗಿತ್ತು. ಆದರೆ ದೇಣಿಗೆ ನೀಡುವವರ ಹೆಸರನ್ನು ಗೌಪ್ಯವಾಗಿಡುವ ಕೆಲಸಕ್ಕೆ ಬಿಜೆಪಿ ನೇತೃತ್ವದ ಎನ್ ಡಿಎ ಸರಕಾರ ಮಾಡಿತ್ತು. ಆ ಬಗ್ಗೆಯೂ ಸುಪ್ರೀಂಕೋರ್ಟ್ ಆಕ್ಷೇಪ ವ್ಯಕ್ತಪಡಿಸಿ, ದೇಣಿಗೆ ನೀಡಿದವರ ಮಾಹಿತಿ ಬಹಿರಂಗಪಡಿಸಬೇಕು ಎಂದು ತೀರ್ಪು ನೀಡಿತ್ತು. ಕೋರ್ಟ್ ತೀರ್ಪು ನಂತರ ಯಾರೆಲ್ಲಾ ರಾಜಕೀಯ ಪಕ್ಷಗಳಿಗೆ ದೇಣಿಗೆ ನೀಡಿ, ಯಾವ ಹಗರಣದಿಂದ ಬಚಾವಾಗಿದ್ದಾರೆ ಎನ್ನುವ ಮಾಹಿತಿ ಆಧರಿಸಿ ಇವತ್ತು ನಿರ್ಮಲಾ ಸೀತಾರಾಮನ್ ವಿರುದ್ಧ ತನಿಖೆಗೆ ಅನುಮತಿ ಕೋರಲಾಗಿತ್ತು.

ಸದ್ಯ ಕೇಂದ್ರ ಸಚಿವೆ, ಬಿಜೆಪಿ ನಾಯಕರು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಭ್ರಷ್ಟಾಚಾರ ಆರೋಪದಡಿ ಎಫ್ ಐಆರ್ ದಾಖಲಾಗಿದೆ. ತನಿಖೆಯೂ ನಡೆಯಲಿದೆ. ಪರಸ್ಪರ ನೈತಿಕ ಹೊಣೆಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎನ್ನುವ ಒತ್ತಾಯ ಎರಡೂ ಪಕ್ಷದ ನಾಯಕರು ಮಾಡುತ್ತಿದ್ದಾರೆ. ಆದರೆ ಯಾರೊಬ್ಬರೂ ನೈತಿಕತೆಯನ್ನು ಪ್ರದರ್ಶಿಸಿ ರಾಜೀನಾಮೆಗೆ ಮುಂದಾಗಿಲ್ಲ. ಎಫ್ ಐಆರ್ ದಾಖಲಾಗಿರುವ ಈ ಸಂದರ್ಭದಲ್ಲಿ ಎರಡೂ ಪಕ್ಷದ ನಾಯಕರು ತಮ್ಮ ನೈತಿಕತೆಯನ್ನು ಪ್ರಶ್ನೆ ಮಾಡಿಕೊಳ್ಳಬೇಕು. ಆತ್ಮವಿಮರ್ಶೆ ಮಾಡಿಕೊಳ್ಳಬೇಕು.

## ಜಕ್ಕಲಿಯಲ್ಲಿ ಚನ್ನಯ್ಯನ ತೊಟ್ಟಿಲೋತ್ಸವ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**


ಸಮೀಪದ ಜಕ್ಕಲಿ ಗ್ರಾಮದ ಸುಮಂಗಲೆಯರು ಹಾಲಕೆರೆ ಶ್ರೀ ಅನ್ನದಾನೇಶ್ವರ ಮಠದಲ್ಲಿ ಒಳಬಳ್ಳಾರಿ ತಾತನವರ ತೊಟ್ಟಿಲೋತ್ಸವವನ್ನು ಸಡಗರದಿಂದ ಆಚರಿಸಿ, ಮಗುವಿಗೆ ಚನ್ನಯ್ಯನೆಂದು ನಾಮಕರಣ ಮಾಡಿ ಸಂಭ್ರಮಿಸಿದರು.

ಜಕ್ಕಲಿ ಗ್ರಾಮದ ಶ್ರೀ ಅನ್ನದಾನೇಶ್ವರ ಜಾತ್ರಾ ಮಹೋತ್ಸವ ಹಾಗೂ ಅಡ್ಡ ಪಲ್ಲಕ್ಕಿ ಉತ್ಸವದ ಅಂಗವಾಗಿ ನಡೆದಿರುವ ಒಳ ಬಳ್ಳಾರಿಯ ತಾತಾನವರ ಪುರಾಣ ಪ್ರವಚನದ ಕಾರ್ಯಕ್ರಮದಲ್ಲಿ ನಡೆದ ಈ ದೃಶ್ಯ ಭಕ್ತರ ಮೈಮನ ತುಂಬಿತು.

ಸಾಂಪ್ರದಾಯದಂತೆ ಮೆಣಸಗಿಯವರ ಓಣಿಯ ಸಕಲ ಸದ್ಭಕ್ತರು ವಿವಿಧ ಬಗೆಯ ಹೂವುಗಳಿಂದ ಶೃಂಗಾರಗೊಳಿಸಿದ್ದ ತೊಟ್ಟಿಲನ್ನು ಶ್ರೀ ಬಸವೇಶ್ವರ ದೇವಸ್ಥಾನದಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭಜನೆ ಮೆರವಣಿಗೆ ಮಾಡುವುದರ ಮೂಲಕ ಶ್ರೀಮಠಕ್ಕೆ ತಂದು ಸಮರ್ಪಣೆ ಮಾಡಿದರು.

ಮಂಜುನಾಥ ಶಾಸ್ತ್ರೀ ಶಿವಪೂಜಿ ಪುರಾಣ ಪ್ರವಚನಗೈದರು. ಶ್ರೀಮಠದ ಸದ್ಭಕ್ತರಾದ ಶೇಖಣ್ಣ ಮೇಟಿ ಪ್ರಸಾದ ಸೇವೆ ವಹಿಸಿಕೊಂಡಿದ್ದರು. ಶ್ರೀಮಠದ ಸಮಿತಿಯ ಹಿರಿಯರಾದ ವೀರಯ್ಯ ಹಿರೇಮಠ, ಶಿವನಾಗಪ್ಪ ದೊಡ್ಡಮೇಟಿ, ಈಶ್ವರಪ್ಪ ಇಟಗಿ, ಸುಭಾಸ ಕಡಗದ, ಪ್ರಕಾಶಪ್ಪ ಹೊಸಮನಿ, ಶರಣಪ್ಪ ಕುರಡಗಿ, ಉಮೇಶ ಕೊಪ್ಪದ, ಮಲ್ಲಿಕಾರ್ಜುನ ಕುರಡಗಿ, ವೀರೇಶ ಹಿರೇಮಠ, ಸಣ್ಣ ದ್ಯಾಮಣ್ಣ ಮಡಿವಾಳರ, ಚನ್ನಬಸಪ್ಪ ಸೂಡಿ, ವೀರಪ್ಪ ತಳವಾರ, ಅಂದಾನಗೌಡ್ರ ಪಾಟೀಲ, ಹರ್ಷವರ್ಧನ್ ದೊಡ್ಡಮೇಟಿ. ಪ್ರಕಾಶ ವಾಲಿ, ಶಾಂತಮ್ಮ ಮೇಟಿ, ಸುಶೀಲಮ್ಮ ಮಸಲವಾಡ, ನೀಲಾಂಬಿಕೆ ಮೇಟಿ, ಲಕ್ಷ್ಮಮ್ಮ ನಾಲ್ವಾಡದ, ಶರಣಮ್ಮ ವಾಲಿ, ಚನ್ನಬಸವ್ವ ಮಡಿವಾಳರ, ನಿರ್ಮಲಾ ಯಾಳಗಿ, ಈರಮ್ಮ ವಾಲಿ, ಭೀಮವ್ವ ಕೋಕುಲದ, ನಂದಾ ಮೆಣಸಗಿ, ಈರವ್ವ ನರೇಗಲ್ಲ, ಪೂರ್ಣಿಮಾ ಆದಿ, ಶಿವಲೀಲಾ ಜೋಗಿ, ಗೀತಾ ಮಂಗಳಗುಡ್ಡ, ಸರೋಜವ್ವ ಜೋಗಿ, ರತ್ನಾ ಹೂಗಾರ ಸೇರಿದಂತೆ ಇತರರಿದ್ದರು. ದ್ಯಾಮಣ್ಣ ಬಡಿಗೇರ, ಈರಣ್ಣ ಕಮ್ಮಾರ ಸಂಗೀತ ಸೇವೆ ನೀಡಿದರು.

ಈ ಸಂದರ್ಭದಲ್ಲಿ ಅಕ್ಕಮಹಾದೇವಿ ಶ್ಯಾಶೆಟ್ಟಿ, ಶರಣಮ್ಮ ಅಂಗಡಿ ಬಸವಣ್ಣನವರ ವಚನ, ಜೋಗುಳ ಪದ, ಸೋಬಾನೆ ಪದಗಳನ್ನು ಹಾಡಿದರು. ಮನೆಯಿಂದಲೇ ಅಕ್ಕಡಿಕಾಳುಗಳಿಂದ ತಯಾರಿಸಿದ್ದ ಗುಗ್ಗರಿಯನ್ನು ಪ್ರಸಾದ ರೂಪದಲ್ಲಿ ಹಂಚಲಾಯಿತು. ಈ ವೇಳೆ ಮದುವೆ ಆಗದವರಿಗೆ ಕಂಕಣ ಕಟ್ಟುವುದು, ಸಂತಾನ ಭಾಗ್ಯ ಇಲ್ಲದವರಿಗೆ ಉಡಿ ತುಂಬುವ ಕಾರ್ಯವು ನಡೆಯಿತು.



ಗದಗ ಜಿಲ್ಲಾ ಮಟ್ಟದ ತ್ರೈಮಾಸಿಕ ಪರಿಶೀಲನಾ ಸಮಿತಿಗೆ (ಕೆಡಿಪಿ) ಆಯ್ಕೆಯಾದ ಎಸ್.ಎನ್. ಬಳ್ಳಾರಿ ಅವರನ್ನು ಸನ್ಮಾನಿಸಿ, ಸಮಿತಿಗೆ ಆಯ್ಕೆ ಮಾಡಿದ ಸಚಿವರಾದ ಎಚ್.ಕೆ. ಪಾಟೀಲರಿಗೆ ಧನ್ಯವಾದ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಜಿಮ್ಸ್ ಮೇಲ್ವಿಚಾರಕರಾದ ಮಲ್ಲಪ್ಪ ಭಾವಿಮನಿ, ಮಂಜುನಾಥ್ ಮಂದಾಲಿ, ಕೃಷ್ಣಾ ಮಡಿವಾಳರ, ಜೈ ಭೀಮ್ ಸಂಘ ಸಮಿತಿಯ ಜಿಲ್ಲಾಧ್ಯಕ್ಷ ಗಣೇಶ್ ಹುಬ್ಬಳ್ಳಿ, ರಾಘವೇಂದ್ರ ನಾಗನಾಥನಳ್ಳಿ, ಹರೀಶ್ ಭಾವಿಮನಿ ಉಪಸ್ಥಿತರಿದ್ದರು.

### ಸಂಗೀತಾಸಕ್ತರ ಮನಸೂರೆಗೊಂಡ ಪುಟ್ಟರಾಜೇಶ ಶರಣಪ್ಪ ಕಲಬುರ್ಗಿ

# ಸಂಗೀತ ಕ್ಷೇತ್ರದ ಧ್ರುವತಾರೆ ಪುಟ್ಟರಾಜೇಶ

ಗದಗ ಎಂದರೆ ನೆನಪಾಗುವುದೇ ಗಾನಗಂಧರ್ವರ ಲೋಕ. ಅಂದರೆ, ನಿಜವಾಗಿಯೂ ಗಾನಗಂಧರ್ವರಾಗಿ, ಅಂಧರ ಬಾಳಿನ ಬೆಳಕಾಗಿ, ಕತ್ತಲೆಯ ಆಕಾಶದಲ್ಲಿ ಅಂಧ ವಿದ್ಯಾರ್ಥಿಗಳಿಗೆ ಸಂಗೀತದ ಸೂರ್ಯನನ್ನು ತೋರಿಸಿದ ಶ್ರೀ ಗಾನಯೋಗಿ ಶಿವಯೋಗಿ ಪಂ. ಪುಟ್ಟರಾಜ ಕವಿ ಗವಾಯಿಗಳ ಆಶ್ರಮ. ಗದಗ ಸಾವಿರಾರು ಸಂಗೀತ ದಿಗ್ಗಜರನ್ನು ವಿಶ್ವಕ್ಕೆ ಉಡುಗೊರೆಯಾಗಿ ನೀಡಿದ ಸಂಗೀತದ ಗಂಧರ್ವಲೋಕ. ಇಂತಹ ಶ್ರೀಗಳ ಕೃಪಾಕಟಾಕ್ಷದಲ್ಲಿ ಪಳಗಿದ ಮತ್ತೊಬ್ಬ ಅದ್ಭುತ ಯುವ ಸಂಗೀತಗಾರ ಹಾಗೂ ಎಲ್ಲ ವಿಧದ ಸಂಗೀತಾಸಕ್ತರ ಮನಸೂರೆಗೊಂಡ ಪುಟ್ಟರಾಜೇಶ ಶರಣಪ್ಪ ಕಲಬುರ್ಗಿ.

ಈ ವಿದ್ಯಾರ್ಥಿ ತಾಯಿ ಅಮರಮ್ಮ, ತಂದೆ ಶರಣಪ್ಪ ಕಲಬುರ್ಗಿಯವರ ಉದರದಲ್ಲಿ ಜನಿಸಿ, ತಂದೆ ನುಡಿಸುತ್ತಿದ್ದ ತಬಲಾ ವಾದನದ ವಾತಾವರಣದಲ್ಲಿ ಬೆಳೆದರು. ಸಂಗೀತದಲ್ಲಿ ಮಗ್ನನಾದ ಪುಟ್ಟರಾಜೇಶನಿಗೆ ಅವನ ಬೆರಳುಗಳು ತಬಲಾದ ಮೇಲೆ ಆಡಲು ಶುರು ಮಾಡಿದವು. ಅವನ ಈ ಬೆರಳುಗಳ ಆಡುವಿಕೆಯ ಮಾಂತ್ರಿಕತೆಯನ್ನು ನೋಡಿ ಅಂದಿನ ಲಿಂ.ಪಂ. ಪಂಡಿತ ಪುಟ್ಟರಾಜ ಕವಿಗವಾಯಿಗಳು ಪುಟ್ಟರಾಜೇಶನ ತಂದೆ ಶರಣಪ್ಪರನ್ನು ಕರೆದು, 'ಈ ನಿನ್ನ ಮಗನಿಗೆ ಸಂಗೀತ ಸರಸ್ವತಿ ಒಲದಾಳ, ಇವನ್ನ ಇಂಜಿನಿಯರನ್ನೋ, ಡಾಕ್ಟರನನ್ನೋ ಮಾಡಲಿಕ್ಕೆ ಹವಣಸಬ್ಯಾಡ. ನೀನು ಅವಗ ತಬಲಾ ಕಲಸು' ಎಂದು ಮನದುಂಬಿ ಆಶೀರ್ವದಿಸಿ, ಕು.ಹಾನಗಲ್ಲ ಮಾಹಾಸ್ವಾಮಿಗಳ ಭಾವಚಿತ್ರದ ಮೇಲಿನ ಹಾರ ಹಾಕಿ ಅನುಗ್ರಹಿಸಿದ ಫಲವೇ ಇಂದು ಪುಟ್ಟರಾಜ ತನ್ನ B.Music ಪದವಿಯನ್ನ ಪಿ.ಪಿ.ಜೆ ಕಾಲೇಜಿನಲ್ಲಿ ಕಲಿತು ಎರಡು ಚಿನ್ನದ



ಪದಕಗಳೊಂದಿಗೆ ಉಚ್ಚ ಶ್ರೇಯಾಂಕ ಪಡೆದು ಶ್ರೀಗಳಿಗೆ, ಹುಟ್ಟಿದ ಮನೆಗೆ ಹಾಗೂ ಗದುಗಿಗೆ ಕೀರ್ತಿ ತಂದಿದ್ದಾನೆ.

ಪುಟ್ಟರಾಜೇಶ ಕಲಬುರ್ಗಿ ಪ್ರಾಥಮಿಕ ಹಂತದಿಂದಲೇ ಒಬ್ಬ ಮೇಧಾವಿ ಕಲಾವಿದನಾಗಿ ಇಂದಿನವರೆಗೆ ಹಲವಾರು ಪ್ರಶಸ್ತಿ-ಪುರಸಾರಗಳನ್ನು ಗಳಿಸಿದ್ದಾನೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2006ರಲ್ಲಿ 'ಬಾಲ ಚಿಗುರು' ಪ್ರಶಸ್ತಿ, 2011ರಲ್ಲಿ ಅಸಾಧಾರಣ ಪ್ರತಿಭಾ ಪುರಸ್ಕಾರ ಹಾಗೂ ಕರ್ನಾಟಕ ಸರ್ಕಾರ ನೀಡುವ ಶ್ರೀ ಕೃಷ್ಣರಾಜ ಒಡೆಯರ್ ಪ್ರಶಸ್ತಿ-2007 ಹಾಗೂ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಮಠದ ಸದ್ಯದ ಸ್ವಾಮಿಗಳಾದ ಅಭಿನವ ಶ್ರೀ ಗವಿಸಿದ್ದೇಶ್ವರ ಮಹಾ ಸ್ವಾಮಿಗಳು ಇವನ ಕಲಾ ಪ್ರತಿಭೆಯನ್ನು ಮೆಚ್ಚಿ 'ತಬಲಾ ರತ್ನ' ಪ್ರಶಸ್ತಿ ನೀಡಿ ಆಶೀರ್ವದಿಸಿದ್ದಾರೆ. ಇನ್ನೂ ಹಲವಾರು ಮಠ-ಮಾನ್ಯಗಳು ಪುಟ್ಟರಾಜೇಶನಿಗೆ ಹಲವಾರು ಬಿರುದುಗಳನ್ನು ನೀಡಿದ್ದಾರೆ.

ಇನ್ನು ಈತನ ಸಂಗೀತ ಪಯಣವನ್ನು ಅವಲೋಕಿಸಿದರೆ, ಲಕ್ಕುಂಡಿ ಉತ್ಸವದಲ್ಲಿ, ಕೊಪ್ಪಳ ಉತ್ಸವದಲ್ಲಿ, ಹಾಗೂ ಗದಗ ಉತ್ಸವದಲ್ಲಿ ತನ್ನ ಪ್ರತಿಭೆ ಪ್ರದರ್ಶಿಸುವುದರೊಂದಿಗೆ ಹಲವಾರು ಖ್ಯಾತ ಸಂಗೀತಗಾರರಿಗೆ ತಬಲಾ ಸಾಥ್ ನೀಡಿ ಮೆಚ್ಚುಗೆ ಗಳಿಸಿದ್ದಾನೆ. ಅವರಲ್ಲಿ ಪ್ರಖ್ಯಾತ ಶಾಸ್ತ್ರೀಯ ಸಂಗೀತಗಾರರಾದ ದಿ.ಪಂ.ಕಿರಣ ಕುಮಾರ ಹಾನಗಲ್, ಸಂಗೀತಾ ಕಟ್ಟಿ, ಪಂ. ಸೋಮನಾಥ ಮರಡೂರ್, ಪಂ. ಕೌಶಿಕ್ ಚಕ್ರವರ್ತಿ, ಪಂ. ವೆಂಕಟೇಶ ಕುಮಾರ್, ಶ್ರೀ ಮಂಜುಷಾ ಪಾಟೀಲ್ ಹಾಗೂ ಕೃಷ್ಣೇಂದ್ರ ವಾಡೆಕರ್‌ರಂತಹ ಹಲವಾರು ಸಂಗೀತ ದಿಗ್ಗಜರಿಗೆ ತಬಲಾ ಸಾಥ್ ನೀಡಿದ್ದಾನೆ. ಅದರಂತೆ ರಾಷ್ಟ್ರ ಮಟ್ಟದ ಪ್ರಖ್ಯಾತ ತಬಲಾ ವಾದಕರಾದ ಪಂ. ಶ್ರೀ ಸುರೇಶ ತಲವೇಕರರ ಹತ್ತಿರ ಸದ್ಯ ತಬಲಾದ ಹೆಚ್ಚಿನ ವ್ಯಾಸಂಗ ಮಾಡುತ್ತಿರುವ ಇವನು ಅನಿಂದೋ ಚಟರ್ಜಿ, ಭರತ್ ಕಾಮತ್, ವಿಜಯ ಘಾಟೆ ಇನ್ನಿತರರೊಂದಿಗೆ ತಬಲಾ ಜುಗಲಬಂದಿ ಹಾಗೂ ಸಾಥ್ ನೀಡಿದ್ದಾನೆ.

ಹೀಗೆ ಸರ್ವ ಕಲಾವಿದರೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವ ಪುಟ್ಟರಾಜೇಶನು 2023-24ನೇ ಸಾಲಿನ ಕರ್ನಾಟಕ ವಿಶ್ವವಿದ್ಯಾನಿಲಯದ 74ನೇ ಘಟಿಕೋತ್ಸವದಲ್ಲಿ B.Music tabla ಪದವಿಯಲ್ಲಿ ಎರಡನೇ ರ‍್ಯಾಂಕ್ ಗಳಸಿ ಎರಡು ಬಂಗಾರದ ಪದಕಗಳೊಂದಿಗೆ ಅತ್ಯುನ್ನತ ಸ್ಥಾನವನ್ನು ಪಡೆದು ಗದುಗಿಗೆ, ಶ್ರೀ ಪುಟ್ಟರಾಜ ಗವಾಯಿಗಳ ಆಶ್ರಮಕ್ಕೆ ಹಾಗೂ ಕಲಿತ ಮಹಾವಿದ್ಯಾನಿಲಯಕ್ಕೆ ಕೀರ್ತಿ ತಂದಿದ್ದಾನೆ. ಈತನಿಗೆ ಈ ಸಾರೆಯ ಘಟಿಕೋತ್ಸವದಲ್ಲಿ ಕರ್ನಾಟಕ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಕೆ.ಬಿ. ಗುಡಸಿಯವರು ದಿ.ಪಂ. ಗುರುಬಸವಾರ್ಚಾಯ ಹಿರೇಮಠ ಮತ್ತು ದಿ. ಶ್ರೀಮತಿ ವೀರಬಸಮ್ಮ ಜಿ.ಹಿರೇಮಠ ಹಾಗೂ ಇನ್ನೋರ್ವ ದತ್ತಿ ದಾನಿಗಳಾದ ದಿ.ಪಂ. ಬಸವರಾಜ ಬೆಂಡಿಗೆರಿ ತಬಲಾ ವಾದಕರು, ಇವರ ಸ್ಮರಣಾರ್ಥ ನೀಡಲಾದ ಬಂಗಾರದ ಪದಕ ನೀಡಿ ಸನ್ಮಾನಿಸಿದ್ದಾರೆ. ಅದರಂತೆ ಹಿರಿಯ ರಾಜಕಾರಣಿಗಳಾದ ಸಿದ್ಧರಾಮಯ್ಯ, ಬಿ.ಎಸ್. ಯಡಿಯೂರಪ್ಪ, ಮಾಜಿ ಶಾಸಕರಾದ ಬಿ. ರಾಮುಲು ಮೊದಲಾದವರು ಸನ್ಮಾನಿಸಿ ಗೌರವಿಸಿದ್ದಾರೆ.

ಈ ಯುವ ಕಲಾವಿದ ಸಂಗೀತ ಕ್ಷೇತ್ರದಲ್ಲಿ ಇನ್ನೂ ಹಚ್ಚಿನ ವ್ಯಾಸಂಗ ಮಾಡಿ ಗದಗಿಗೆ ಕೀರ್ತಿ ತರುವುದರೊಂದಿಗೆ ಉತ್ತಮ ತಬಲಾ ಪಟುವಾಗಿ, ಸಂಗೀತಗಾರನಾಗಿ ಹೊರಹೊಮ್ಮಲಿ ಎಂದು ಹಾರೈಸೋಣ.

ಭವಿಷ್ಯತ್ತಿನಲ್ಲಿ ಉತ್ತಮ, ಶಾಸ್ತ್ರೀಯ ಸಂಗೀತಗಾನಾಗಿ, ತಬಲಾ ವಾದಕನಾಗಿ ತಮ್ಮ ಜೀವನವನ್ನು ರೂಪಿಸಿಕೊಳ್ಳಲು ಬಯಸಿರುವ ಪುಟ್ಟರಾಜೇಶ ಕಲಬುರ್ಗಿ ಈತನಿಗೆ ಪಂ. ಕಲ್ಲಯ್ಯಜ್ಜನವರು, ಜಗದ್ಗುರು ತೋಂಟದ ಶ್ರೀ ಸಿದ್ದರಾಮ ಮಹಾಸ್ವಾಮಿಗಳು ಗದಗ, ಅಭಿನವ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು, ಗುರುಗಳಾದ ಸುರೇಶ ತಲವೇಕರ, ಪಂ. ವೆಂಕಟೇಶ ಕುಮಾರ, ಪಂ. ಗುರುನಾಥ ಸುತಾರ, ಉದಯೋನ್ಮುಖ ಯುವಸಂಗೀತ ಕಲಾವಿದರಾದ ವಿಜಯ ಸುತಾರ, ಪ್ರಸಾದ್ ಸುತಾರ, ಆಪ್ತರಾದ ಟೆಕ್ಕಿ ಸಿದ್ದಾರ್ಥ ಪತ್ತೇಪೂರ್ ಶುಭ ಹಾರೈಸಿದ್ದಾರೆ.

– ತನ್ವೀ ಮೋನೆ.
ಗದಗ.

## ಹಿಂದೂ ಮಹಾಗಣಪತಿಗೆ ವಿಶೇಷ ಪೂಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ವೀರಶೈವ ಲೈಬ್ರರಿ ಹತ್ತಿರ ಸುದರ್ಶನ ಚಕ್ರ ಯುವ ಮಂಡಳ ವತಿಯಿಂದ ಪ್ರತಿಷ್ಠಾಪನೆ ಮಾಡಿರುವ ಗದಗ ಜಿಲ್ಲೆಯ ಹಿಂದೂ ಮಹಾಗಣಪತಿಯ 21ನೇ ದಿನವಾದ ಶುಕ್ರವಾರ ಬೆಳಿಗ್ಗೆ ಮಾಜಿ ಸಚಿವ ಸಿ.ಸಿ. ಪಾಟೀಲ ಹಾಗೂ ಶಿರಹಟ್ಟಿ ಶಾಸಕ ಚಂದ್ರು ಲಮಾಣಿ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.




ಈ ಸಂದರ್ಭದಲ್ಲಿ ಸುದರ್ಶನ ಚಕ್ರ ಯುವ ಮಂಡಳ, ಹಿಂದೂ ಮಹಾಗಣಪತಿ ಸಮಿತಿಯ ಗೌರವ ಅಧ್ಯಕ್ಷ ಎಸ್.ಎಚ್. ಶಿವನಗೌಡ್ರ, ಸುದರ್ಶನ ಚಕ್ರ ಯುವ ಮಂಡಳದ ಮತ್ತು ಹಿಂದೂ ಮಹಾಗಣಪತಿ ಸಮಿತಿಯ ಅಧ್ಯಕ್ಷ ಸುಧೀರ ಕಾಟಿಗಾರ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ, ಬಿಜೆಪಿಯ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ, ರವಿ ಮಾಳೆಕೊಪ್ಪ, ಅಶ್ವಿನಿ ಜಗತಾಪ, ವಂದನಾ ವೇರಣೆಕರ, ನಗರಸಭೆಯ ಸದಸ್ಯರಾದ ಹುಲಿಗೆಮ್ಮ ಹಬೀಬ, ಶಿವರಾಜ ಹಿರೇಮನಿಪಾಟೀಲ, ಕುಮಾರ ಮಾರನಬಸರಿ, ಸುರೇಶ ಮೇದಾರ, ಪ್ರಶಾಂತ ನಾಯ್ಕರ, ಮಹೇಶ ದಾಸರ, ರಮೇಶ ಸಜ್ಜಗಾರ ಮುಂತಾದವರು ಇದ್ದರು.

## ಬಿತ್ತನೆ ಬೀಜ ವಿತರಣೆಗೆ ಚಾಲನೆ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದಲ್ಲಿ 2024/25ನೇ ಸಾಲಿನ ಹಿಂಗಾರು ಬಿತ್ತನೆ ಬೀಜವನ್ನು ರಿಯಾಯತಿ ದರದಲ್ಲಿ ವಿತರಿಸುವ ಕಾರ್ಯಕ್ಕೆ ಹುಲಕೋಟಿ ಕೃಷಿ ಸಹಾಯಕ ಅಧಿಕಾರಿ ಬಸವರಾಜೇಶ್ವರಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರು ಶಾಂತಿಯುತವಾಗಿ ಬಿತ್ತನೆ ಬೀಜಗಳನ್ನು ಪಡೆಯಬೇಕು. ಕಡಲೆ, ಜೋಳ, ಕುಸುಬಿ ಬೀಜಗಳನ್ನು ಈಗಾಗಲೇ ದಾಸ್ತಾನು ಮಾಡಲಾಗಿದ್ದು, ರೈತರು ಎಫ್‌ಐಡಿ ಅಥವಾ ಆಧಾರ್ ಕಾರ್ಡ್ ಝುರಾಕ್ಸ ಪ್ರತಿಗಳನ್ನು ನೀಡಿ ಬೀಜಗಳನ್ನು ರಿಯಾಯತಿ ದರದಲ್ಲಿ ಪಡೆದುಕೊಳ್ಳಬೇಕು ಎಂದರು. ಕಾಶೀಮಸಾಬ ಹಾದಿಮನಿ, ಮಂಜುನಾಥ ಕರಿಗಾರ, ರೈತ ಸಂಘದ ಅಧ್ಯಕ್ಷ ದೇವರಾಜ ಸಂಘನಪೆಟಿ, ಬಸವರಾಜ ಕರಿಗಾರ, ಗುಡುಸಾಬ ಗಾಡಿ, ಮೊದಿನಸಾಬ ಶೇಖ, ರವಿ ಜಾಧಾವ, ಬೂದಿಶ ಸಿದ್ದನಗೌಡರ, ಜಗದೀಶ ವಿಜಾಪೂರ, ಶಂಕ್ರಯ್ಯ ಹಿರೆಮಠ, ನಾಗರಾಜ ಹುಲಕೋಟಿ ಇದ್ದರು.

## ಬಣಜಿಗ ಸಮಾಜದ 30ನೇ ವಾರ್ಷಿಕ ಸಭೆ





**■ವಿಜಯಸಾಕ್ಷಿ ಸುದ್ದಿ, ರೋಣ**

ಇಲ್ಲಿನ ತಾಲೂಕು ಪತ್ತಿನ ಸಹಕಾರ ಸಂಘ ಹಾಗೂ ರೋಣ ತಾಲೂಕಾ ಬಣಜಿಗ ಸಮಾಜದ 30ನೇ ವಾರ್ಷಿಕ ಸಭೆಯು ರೋಣ ನಗರದ ಕಸಾಪ ಭವನದಲ್ಲಿ ಜರುಗಿತು. ಸಭೆಯನ್ನು ವಿಧಾನ ಪರಿಷತ್ ಮಾಜಿ ಸಭಾಪತಿ ವೀರಣ್ಣನವರು ಮತ್ತಿಕಟ್ಟಿ ಉದ್ಘಾಟಿಸಿ ಮಾತನಾಡಿ, ಸಮಾಜ ಮತ್ತು ಸೊಸೈಟಿ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ನಮ್ಮ ಹಿರಿಯರು ಕಟ್ಟಿ ಬೆಳೆಸಿದ ಸಂಸ್ಥೆಯನ್ನು ಬೆಳೆಸಿಕೊಂಡು ಹೋಗುತ್ತಿರುವದಕ್ಕೆ ಶುಭ ಹಾರೈಸಿ ಸಂತೋಷ ವ್ಯಕಪಡಿಸಿದರು.

ಸಭೆಯ ಅಧ್ಯಕ್ಷತೆಯನ್ನು ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸೋಮು ಚರೇದ ವಹಿಸಿದ್ದರು. ಬಣಜಿಗ ಸಮಾಜದ ಅಧ್ಯಕ್ಷ ಮುತ್ತಣ್ಣ ಸಂಗಳದ, ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯ ಸಮಿತಿಗೆ ಸದಸ್ಯರಾಗಿ ಆಯ್ಕೆಯಾದ ಮಿಥುನಗೌಡ್ರ ಜಿ.ಪಾಟೀಲ, ರೋಣ ಪುರಸಭೆ ನಾಮ ನಿರ್ದೇಶಕರಾದ ಆನಂದ ಚಂಗಳಿ, ಮಹೇಶ ಗದಗ, ಸಮಾಜ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ಪುರಸಭೆ ಸದಸ್ಯರಾದ ವಿಜಯಲಕ್ಷ್ಮೀ ಬಸವರಾಜ ಕೊಟಗಿ, ಬಣಜಿಗ ಸಮಾಜದ ಉಪಾಧ್ಯಕ್ಷ ಸಂಗಣ್ಣ ಮೆಣಸಿನಕಾಯಿ, ಕಾರ್ಯದರ್ಶಿ ಮುತ್ತಣ್ಣ ಗದಗ, ಮುತ್ತಣ ಕಡಗದ ಮುಂತಾದವರಿದ್ದರು.

## ಬೀಚಿ ಬಳಗದಲ್ಲಿ ಶಿಕ್ಷಕರ ದಿನಾಚರಣೆ ಇಂದು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಬೀಚಿ ಬಳಗದ ಆಶ್ರಯದಲ್ಲಿ ಸೆ.28ರಂದು ಸಂಜೆ 4ಕ್ಕೆ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ಬಳಗದ ಸಂಚಾಲಕ ಈಶ್ವರ ಬೆಟಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ವಹಿಸಲಿದ್ದು, ಸಮಾರಂಭದಲ್ಲಿ ತಾಲೂಕಾ ಉತ್ತಮ ಉಪನ್ಯಾಸಕ ಪ್ರಶಸ್ತಿ ಪುರಸ್ಕೃತ, ಶ್ರೀ ಅನ್ನದಾನೇಶ್ವರ ಪಿಯು ಕಾಲೇಜಿನ ಉಪನ್ಯಾಸಕ ಎಫ್.ಎನ್. ಹುಡೇದ, ತಾಲೂಕಾ ಉತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತೆ ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ, ನಂದಿವೇರಿ ಮಠದ ಕಪ್ಪತ್ತಗಿರಿ ಫೌಂಡೇಶನ್ ಸಾಹಿತ್ಯ ವೇದಿಕೆ ಉತ್ತಮ ಶಿಕ್ಷಕ ಪುರಸ್ಕೃತ ಶ್ರೀ ಅನ್ನದಾನೇಶ್ವರ ಬಾಲಿಕೆಯರ ಪ್ರೌಢಶಾಲೆಯ ಶಿಕ್ಷಕ ಬಿ.ಡಿ. ಯರಗೊಪ್ಪ, ಕನ್ನಡ ಎಂ.ಎ.ದಲ್ಲಿ ಬಂಗಾರದ ಪದಕ ಪುರಸ್ಕೃತೆ ಪೂಜಾ ವಿನಾಯಕ ಗ್ರಾಮಪುರೋಹಿತ ಮತ್ತು ಡಿಜಿ2024ರ ಛಾಯಾಶ್ರೀ ಪ್ರಶಸ್ತಿ ಪುರಸ್ಕೃತ, ಪಟ್ಟಣದ ಮಂಜುನಾಥ ಫೋ-ಟೋ ಸ್ಟುಡಿಯೋದ ಮಾಲೀಕ ಮಲ್ಲಯ್ಯ ಗುಂಡಗೋಪುರಮಠ ಅವರನ್ನು ಸನ್ಮಾನಿಸಲಾಗುವುದೆಂದು ಬೆಟಗೇರಿ ತಿಳಿಸಿದ್ದಾರೆ.

## ಬೆರಳಚ್ಚು ಪರೀಕ್ಷೆಯಲ್ಲಿ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸಲ್ಪಡುವ ಬೆರಳಚ್ಚು ವಾರ್ಷಿಕ ಪರೀಕ್ಷೆಯಲ್ಲಿ ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯದ ಫಲಿತಾಂಶವು 100ಕ್ಕೆ ಶೇ.89.5ರಷ್ಟು ಆಗಿದೆ.

ಇಂಗ್ಲೀಷ್ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಕಿರಣ ಐ.ಬೇಲೇರಿ ಶೇ.84.5, ಜ್ಯೂನಿಯರ್ ವಿಭಾಗದಲ್ಲಿ ಪೂಜಾ ಬೆಳದಡಿ ಶೇ. 90 ಮತ್ತು ಅನ್ನಪೂರ್ಣ ಎಫ್.ದೇಸಾಯಿ ಶೇ.85.5 ಫಲಿತಾಂಶ ಪಡೆದಿದ್ದಾರೆ. ಕನ್ನಡ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಶ್ವೇತಾ ಎಸ್.ಹಾಳಕೇರಿ ಶೇ. 85.0, ರುಕ್ಸಾರ ಕೊಪ್ಪಳ ಶೇ. 81.0 ಅಂಕ ಪಡೆದಿದ್ದಾರೆ. ಪ್ರಥಮ ಸ್ಥಾನದಲ್ಲಿ 19 ವಿದ್ಯಾರ್ಥಿಗಳು, ದ್ವಿತೀಯ ಸ್ಥಾನದಲ್ಲಿ 36 ವಿದ್ಯಾರ್ಥಿಗಳು ಉಳಿದ 11 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.ಸಾಧಕ ವಿದ್ಯಾರ್ಥಿಗಳಿಗೆ ವಿದ್ಯಾಲಯದ ಮಾಲೀಕರು/ ಪ್ರಾಚಾರ್ಯರಾದ ಡಾ. ತಯಬಅಲಿ ಅ. ಹೊಂಬಳ ಅಭಿನಂದಿಸಿದ್ದಾರೆ.

## ಅ.2ರಂದು ಮಾಂಸ ಮಾರಾಟ ಬಂದ್

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಖಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರು ಮಹಾತ್ಮ ಗಾಂಧಿ ಜಯಂತಿ ಅಂಗವಾಗಿ ಅಕ್ಟೋಬರ್ 2ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ.

ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಸ್ತೆಯಲ್ಲಿಯೇ ಶೌಚಾಲಯ ನಿರ್ಮಾಣ | ಇಕ್ಕಾಟ್ಟಾಗುತ್ತಿರುವ ರಸ್ತೆಗಳು | ವಾರ್ಡ್ ಸಭೆಯಲ್ಲಿ ದೂರುಗಳ ಸಾಲು

# ಗ್ರಾಮದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ನೀರು ಪೂರೈಕೆಯಲ್ಲಿ ತಾರತಮ್ಯ, ರಸ್ತೆಯಲ್ಲಿಯೇ ವೈಯಕ್ತಿಕ ಶೌಚಾಲಯ ನಿರ್ಮಾಣ, ನಿಗದಿತ ಸಮಯದೊಳಗೆ ಸಹಾಯಧನ ತಲುಪಿಸದಿರುವುದು ಸೇರಿದಂತೆ ಹಲವು ಮೂಲಭೂತ ಸೌಲಭ್ಯಗಳ ಕುರಿತು ಕಳೆದ ಮೂರು ದಿನಗಳಿಂದ ಇಲ್ಲಿಯ ವಿವಿಧ ಸಮುದಾಯ ಭವನದಲ್ಲಿ ನಡೆದ ವಾರ್ಡ್ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು.

ಸರಕಾರದ ಸಹಾಯ ಧನ ಪಡೆದು ರಸ್ತೆಯಲ್ಲಿಯೇ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಂಡಿದ್ದರಿಂದ ರೈತರ ಕೃಷಿ ಚಟುವಟಿಕೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿದೆ ಎಂದು 11 ಮತ್ತು 7ನೇ ವಾರ್ಡಿನ ನಾಗರಿಕರು ದೂರಿದರು. ಅಂಬೇಡ್ಕರ ನಗರದಲ್ಲಿ ಗ್ರಂಥಾಲಯ ಕಟ್ಟಡ ನಿರ್ಮಾಣ, ಹೈಟೆಕ್ ಶೌಚಾಲಯಕ್ಕಾಗಿ ಒತ್ತಾಯಿಸಲಾಯಿತು. ನಿಗದಿತ ಸಮಯದಲ್ಲಿ ಸಭೆಯ ನೋಟಿಸ್ ಅಂಟಿಸಬೇಕು, ಉದ್ಯೋಗ ಖಾತರಿ ಯೋಜನೆಯ



ಕಾಮಗಾರಿಗೆ ಕೇವಲ ಹೆಸರು ನೊಂದಾವಣಿ ಬೇಡ ಎಂದು 9ನೇ ವಾರ್ಡಿನ ನಾಗರಿಕರು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದ ಹಲವು ಓಣಿಯ ರಸ್ತೆಯಲ್ಲಿ ಹಿಂದಿನ ಅವಧಿಯಲ್ಲಿ ಕಳಪೆ ಮಟ್ಟದ ಸಿ.ಸಿ ರಸ್ತೆ ನಿರ್ಮಾಣದಿಂದ ಕಾಮಗಾರಿ ಮುಕ್ತಾಯದ ಕೆಲ ತಿಂಗಳಲ್ಲಿಯೇ ಕಿತ್ತು ಹೋಗಿದ್ದು, ಕಲ್ಲಿನ ಕಡಿ ಮಾತ್ರ ಉಳಿದಿದೆ. ಇದರಿಂದ ಮಕ್ಕಳು, ವಯೋವೃದ್ಧರಿಗೆ ನಡೆದಾಡುವಾಗ ಕಲ್ಲಿನ ಕಡಿಗಳು ಕಾಲಿಗೆ ನಾಟಿ ಗಾಯಗಳಾಗುತ್ತಿವೆ. ಈ ಸಿ.ಸಿ ರಸ್ತೆಯನ್ನು ಮರು ನಿರ್ಮಿಸಿಕೊಡಬೇಕು ಎಂದು 9 ಮತ್ತು 6ನೇ ವಾರ್ಡಿನ ನಾಗರಿಕರು ಒತ್ತಾಯಿಸಿದರು.

ಮಳೆ ಮತ್ತು ಗಟಾರು ನೀರು ಹಲವು ವರ್ಷಗಳಿಂದ ನಮ್ಮ ಸ್ವಂತ ಜಾಗದಲ್ಲಿ ಹಾಕಿದ ಬಣವಿಯ ಸ್ಥಳದಲ್ಲಿ ನಿಲ್ಲುವುದರಿಂದ ಪ್ರತಿ ವರ್ಷ ಮೇವು ಕೆಡುತ್ತಿದೆ. ಗಟಾರು ನೀರು ವಾಸನೆಯಿಂದ ವಾಸ ಮಾಡುವುದಕ್ಕೆ ತೊಂದರೆಯಾಗುತ್ತಿದೆ. ಈ ಬಗ್ಗೆ ಹಲವು ಸಲ ಗ್ರಾ.ಪಂಗೆ ತಿಳಿಸಿದರೂ ಸಹ ಪ್ರಯೋಜನವಾಗುತ್ತಿಲ್ಲ ಎಂದು 7ನೇ ವಾರ್ಡಿನ ನಾಗರಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ತುಂಗಾಭದ್ರಾ ನದಿ ನೀರು ತುಂಬಿಸಿರುವ ಐತಿಹಾಸಿಕ ಹಾಲಗೊಂಡ ಬಸವೇಶ್ವರ ಕೆರೆಗೆ ಗ್ರಾಮದ ಬಚ್ಚಲು, ಕೊಳಚೆ, ಶೌಚಾಲಯದಿಂದ ಹರಿಯುವ ನೀರು ಗಟಾರು ಮೂಲಕ ಸೇರುತ್ತದೆ. ಇದರಿಂದ ನೀರು ಮಲಿನವಾಗಿದೆ. ಇದರಲ್ಲಿ ದನ-ಕರುಗಳು ಸ್ನಾನ ಮಾಡುತ್ತಿದ್ದು, ರೋಗಗಳು ಅಂಟಿಕೊಳ್ಳುತ್ತಿವೆ. ಕೊಳಚೆ ನೀರು ಹೋಗಲು ಬೇರೆ ವ್ಯವಸ್ಥೆ ಕಲ್ಪಿಸಿ ಎಂದು 3ನೇ ವಾರ್ಡಿನ ನಾಗರಿಕರು ಒತ್ತಾಯಿಸಿದರು. ಇದಕ್ಕೆ ಉತ್ತರಿಸಿದ ಅಧಿಕಾರಿಗಳು ಕೊಳಚೆ ನೀರು ಇಂಗಿಸಿ ತಿಳಿ ನೀರು ಮಾತ್ರ ಕೆರೆಗೆ ಸೇರಿಸುವ ಕಾಮಗಾರಿ ಆರಂಭವಾಗಿದೆ ಎಂದು ವಿವರಿಸಿದರು.

ಗ್ರಾ.ಪಂ ಆಸ್ತಿ ಮಕ್ಕಳಿಗೆ, ಸಹೋದರರಿಗೆ ಹಂಚಿಕೆಯಾಗುತ್ತಿವೆ. ಭೂ ಭಾಡಿಗೆ ನಿಯಮಾವಳಿ ಪ್ರಕಾರ ಗ್ರಾ.ಪಂನ ದೊಡ್ಡ ಆಸ್ತಿಯು ಮತ್ತೊಬ್ಬ ಅರ್ಹರಿಗೆ ಉದ್ಯೋಗ ಮಾಡಲು ದೊರೆಯಬೇಕು. ಈ ಬಗ್ಗೆ ಅಧಿಕಾರಿಗಳು, ಗ್ರಾ.ಪಂ ಆಡಳಿತ ಕ್ರಮ ಜರುಗಿಸಬೇಕು ಎಂದು 3ನೇ ವಾರ್ಡಿನ ನಾಗರಿಕರು ಒತ್ತಾಯಿಸಿದರು. ಅತ್ತಿಮಬ್ಬೆ ಸ್ಮಾರಕ ಭವನ ನಿರ್ಮಿಸುವುದು ಸೇರಿದಂತೆ ಹಲವು ವೈಯಕ್ತಿಕ ಮತ್ತು ಸಮುದಾಯ ಅಭಿವೃದ್ಧಿ ಕುರಿತು ಚರ್ಚೆ ನಡೆಯಿತು.

ಜೆಜೆಎಂ ಕಾಮಗಾರಿ ಅಪೂರ್ಣವಾಗಿರುವುದರಿಂದ ಸಮರ್ಪಕ ಕುಡಿವ ನೀರು ಪೂರೈಕೆಯಲ್ಲಿ ವ್ಯತ್ಯಾಸವಾಗುತ್ತಿದ್ದು, ನೀರಿನ ತೊಂದರೆ ಶೀಘ್ರ ಬಗೆಹರಿಸಲಾಗುವುದು. ನೀರನ್ನು ವ್ಯರ್ಥ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಅವಶ್ಯವಿರುವ ಕಡೆ ಹೈಟೆಕ್ ಶೌಚಾಲಯ ನಿರ್ಮಿಸಲಾಗುತ್ತಿದ್ದು, ಗ್ರಾಮದ ಸ್ವಚ್ಛತೆಗೆ ಸಹಕರಿಸಬೇಕು. ವಿಳಂಬವಾದರೂ ಸಹ ಪ್ರಮಾಣಿಕವಾಗಿ ಗ್ರಾಮದ ಅಭಿವೃದ್ಧಿ ಮಾಡಲು ಪ್ರಯತ್ನಿಸಲಾಗುತ್ತಿದ್ದು ಅ.2ರಂದು ನಡೆಯುವ ಗ್ರಾಮ ಸಭೆಯಲ್ಲಿ ಭಾಗಿಯಾಗಿ ಯಶಸ್ವಿಗೊಳಿಸಬೇಕೆಂದು ಗ್ರಾ. ಪಂ ಅದ್ಯಕ್ಷ ಕೆ.ಎಸ್. ಪೂಜಾರ ವಿನಂತಿಸಿಕೊಂಡರು.

# ವಿದ್ಯಾರ್ಥಿಗಳಿಗೆ ಪೌಷ್ಠಿಕ ಆಹಾರ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಧಾನಮಂತ್ರಿ ಪೋಷನ್ ಶಕ್ತಿ ನಿರ್ಮಾಣ ಯೋಜನೆ ಹಾಗೂ ಅಜೀಂ ಪ್ರೇಮ್ ಜಿ ಪೌಂಡೇಶನ್‌ನಿಂದ ವಾರದಲ್ಲಿ ಹೆಚ್ಚುವರಿ 4 ದಿನಗಳ ಪೂರಕ ಪೌಷ್ಟಿಕ ಆಹಾರ ವಿತರಿಸುವ ಕಾರ್ಯಕ್ರಮದ ಅಂಗವಾಗಿ ನಗರದ ಎಸ್.ಎಂ. ಕೃಷ್ಣಾ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕತೆ ವೃದ್ಧಿಸಲು ಮೊಟ್ಟೆ, ಬಾಳೆ ಹಣ್ಣು, ಶೇಂಗಾ ಚಿಕ್ಕಿಯನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ವಿತರಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಖನಿಜ ಅಬಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ನಗರಸಭೆ ಸದಸ್ಯೆ ಲಕ್ಷ್ಮೀ ಸಿದ್ದಮ್ಮನಹಳ್ಳಿ, ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಕಡೇಮನಿ, ಕೆಡಿಪಿ ಸಮಿತಿಯ ಸದಸ್ಯ ಎಸ್.ಎನ್. ಬಳ್ಳಾರಿ, ಅಶೋಕ ಮಂದಾಲಿ, ಜಿ.ಪಂ ಸಿಇಒ ಭರತ್ ಎಸ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ ,ಬಿಇಒ ಆರ್. ಎಸ್. ಬುರಡಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ವಿಶ್ವ ಕಿವುಡರ ದಿನಾಚರಣೆ, ಮಕ್ಕಳ ದಂತ ತಪಾಸಣೆ

# ಹಲ್ಲುಗಳ ರಕ್ಷಣೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ರೋಟರಿ ಕ್ಲಬ್ ಹಾಗೂ ಗದುಗಿನ ಸ್ಪಂದನ ಕಿವುಡ ಮತ್ತು ಮೂಗ ಮಕ್ಕಳ ಶಾಲೆಯ ಆಶ್ರಯದಲ್ಲಿ ವಿಶ್ವ ಕಿವುಡರ ದಿನಾಚರಣೆ ಹಾಗೂ ಮಕ್ಕಳ ದಂತ ತಪಾಸಣೆ ಕಾರ್ಯಕ್ರಮವನ್ನು ನಗರದ ಸ್ಪಂದನ ಶಾಲೆಯಲ್ಲಿ ಏರ್ಪಡಿಸಲಾಗಿತ್ತು.

ಮಕ್ಕಳ ದಂತವನ್ನು ಪರೀಕ್ಷಿಸಿ ಸಲಹೆ ನೀಡಿದ ದಂತ ಚಿಕತ್ಸಕ ಹಾಗೂ ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ.ರೇವಣಸಿದ್ಧೇಶ್ವರ ಉಪ್ಪಿನ, ಮಕ್ಕಳು ದಂತಕ್ಷಯ ಬರದಂತೆ ಹಲ್ಲುಗಳನ್ನು ರಕ್ಷಿಸಿಕೊಳ್ಳಲು ಬೆಳಿಗ್ಗೆ ಹಾಗೂ ಸಂಜೆ ಸರಿಯಾದ ಕ್ರಮದಲ್ಲಿ ಹಲ್ಲುಜ್ಜಬೇಕು. ಸಿಹಿ ಪದಾರ್ಥ ಹಾಗೂ ಅತಿಯಾದ ಚಾಕಲೇಟ್ ಸೇವನೆ ಒಳ್ಳೆಯದಲ್ಲ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಮುಖ್ಯೋಪಾಧ್ಯಾಯ ಎಸ್.ಬಿ. ಬಾಗೇವಾಡಿ ಮಾತನಾಡಿ, ವಿಶೇಷ ಚೇತನ ಮಕ್ಕಳ ಆರೋಗ್ಯ ರಕ್ಷಣೆಯತ್ತ ನಾವೆಲ್ಲರೂ ಹೆಚ್ಚು ಗಮನ ಹರಿಸಬೇಕು. ಸರಿಯಾದ ಜೀವನ ಕ್ರಮವನ್ನು ರೂಢಿಸಿಕೊಳ್ಳಲು ಮಾರ್ಗದರ್ಶನ ನೀಡಬೇಕು ಎಂದರು.



ಕ್ರಾಂತಿ ಸೇನಾ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಬಾಲ್ಯದಲ್ಲಿಯೇ ಈ ಮಕ್ಕಳು ತಮಗೆ ಅರಿವಿಲ್ಲದೆ ವಿಶೇಷ ಚೇತನ ಮಕ್ಕಳಾಗಿದ್ದು, ಪ್ರೀತಿ-ವಾತ್ಸಲ್ಯದಿಂದ ನಾವು ಇವರ ಮನಸ್ಸನ್ನು ಗೆದ್ದು ಅವರಲ್ಲಿ ಆತ್ಮವಿಶ್ವಾಸ ತುಂಬಬೇಕು ಎಂದರು.

ಸ್ಪಂದನಾ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಡಾ. ಎಸ್.ಎಫ್. ದ್ಯಾವನಗೌಡ್ರ ಮಾತನಾಡಿ, ಮೂಗ ಮತ್ತು ಕಿವುಡು ಮಕ್ಕಳು ನೋಡಬಲ್ಲರು ಮತ್ತು ತಿಳಿಯಬಲ್ಲರು. ಆದರೆ ಉತ್ತರಿಸಲಾಗದೇ ಚಡಪಡಿಸುವರು. ಇವರಿಗೆ ಜೀವನ ಕೌಶಲ್ಯಗಳನ್ನು ನಾವು ಹೆಚ್ಚು ರೂಢಿ ಮಾಡುವುದರಿಂದ ಬದುಕನ್ನು ಕಟ್ಟಿಕೊಳ್ಳಲು ಸಹಾಯವಾಗುವದು ಎಂದರು.

ವೇದಿಕೆ ಮೇಲೆ ಎಸ್.ಎಸ್. ಹೊಸಳ್ಳಿಮಠ ಉಪಸ್ಥಿತರಿದ್ದರು. ಮುಖ್ಯೋಪಾಧ್ಯಾಯೆ ಲಲಿತಾ ಪಾಟೀಲ ಸ್ವಾಗತಿಸಿದರು. ಶಾಂತಾ ಗದಗ ನಿರೂಪಿಸಿದರು. ಚಂದ್ರಮ್ಮ ಕೊಟಗಿ ಪರಿಚಯಿಸಿದರು. ವಿದ್ಯಾ ಪೂಜಾರ ವಂದಿಸಿದರು.

# ಡಾ. ಅಂಬೇಡ್ಕರ್ ಪುತ್ಥಳಿ ನಿರ್ಮಿಸಲು ಮನವಿ




■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಜೋಡು ರಸ್ತೆಯಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಸಂವಿಧಾನಶಿಲ್ಪಿ ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಿಸಲು ಪುರಸಭೆ ಮುಂದಾಗಬೇಕು ಎಂದು ಒತ್ತಾಯಿಸಿ ಶುಕ್ರವಾರ ಕ್ರಾಂತಿಸೂರ್ಯ ಜೈಭೀಮ್ ಸೇನೆ ಪದಾಧಿಕಾರಿಗಳು ಮುಖ್ಯಾಧಿಕಾರಿಗೆ ಮನವಿ ನೀಡಿದರು.

ಸಂಘಟನೆಯ ಮುಖಂಡ ಪ್ರಕಾಶ ರಾಠೋಡ ಮಾತನಾಡಿ, ಪಟ್ಟಣದ ಜೋಡು ರಸ್ತೆಯಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ ಅವರ ಹೆಸರಿನಲ್ಲಿ ವೃತ್ತ ನಿರ್ಮಿಸಲಾಗಿದೆ. ಆದರೆ, ಡಾ. ಅಂಬೇಡ್ಕರ್ ಅವರ ಪುತ್ಥಳಿಯನ್ನು ವೃತ್ತದಲ್ಲಿ ಪುರಸಭೆ ಇನ್ನೂ ನಿರ್ಮಿಸಿಲ್ಲ. ಹೀಗಾಗಿ ಪುರಸಭೆ ವತಿಯಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣ ಯೋಜನೆ, ಪ್ರಸ್ತುತ ಸಾಲಿನ ಎಸ್‌ಎಫ್‌ಸಿ ಹಾಗೂ ಪುರಸಭೆ ನಿಧಿ ಬಳಸಿಕೊಂಡು ಅಂಬೇಡ್ಕರ್ ಅವರ ವೃತ್ತದಲ್ಲಿ ಮಹಾನಾಯಕ ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಾಣಕ್ಕೆ ಮುಂದಾಗಬೇಕು ಎಂದರು.

ಈ ವೇಳೆ ಕನಕಪ್ಪ ಕಲ್ಲೊಡ್ಡರ, ರವಿ ನಿಡಗುಂದಿ, ಅಮಿತ ಭಜಂತ್ರಿ, ರಮೇಶ ತಳವಾರ, ದುರಗಪ್ಪ ಪೂಜಾರ, ಮಾರುತಿ ಬಂಕದ, ಶುಭಂ ಮಾರನಾಳ, ಕಿರಣ ವಡ್ಡರ, ಮಾರುತಿ ವಡ್ಡರ ಮುಂತಾದವರಿದ್ದರು.

# ದಾವಲಸಾಬ ನರಗುಂದರಿಗೆ ಚಿನ್ನದ ಪದಕ




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಳಗುಂದ ಪಟ್ಟಣದ ಮೀರಾಸಾಬ (ಅಮಜಾದ) ನರಗುಂದ ಮತ್ತು ಬೀಬಿಜಾನ ನರಗುಂದ ದಂಪತಿಗಳ ಮಗನಾದ ದಾವಲಸಾಬ ನರಗುಂದ ಅವರು ಕರ್ನಾಟಕ ವಿಶ್ವವಿದ್ಯಾಲಯದ ಡಾ. ಆರ್.ಸಿ. ಹಿರೇಮಠ ಕನ್ನಡ ಅಧ್ಯಯನ ಪೀಠದ ಸಹಾಯಕ ಪ್ರಾಧ್ಯಾಪಕ ಡಾ.ನಿಂಗಪ್ಪ ಎನ್. ಹಳ್ಳಿ ಇವರ ಮಾರ್ಗದರ್ಶನದಲ್ಲಿ 'ಕಡಕೋಳ ಮಡಿವಾಳಪ್ಪ ಮತ್ತು ಶಿಶುನಾಳ ಶರೀಫರು : ತೌಲನಿಕ ಅಧ್ಯಯನ' ಎಂಬ ವಿಷಯ ಕುರಿತು ಸಂಶೋಧನಾ ಮಹಾಪ್ರಬಂಧವನ್ನು ಸಲ್ಲಿಸಿ, ಕರ್ನಾಟಕ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿಯನ್ನು ಪಡೆದುಕೊಂಡಿದ್ದಾರೆ. ಇವರಿಗೆ 74ನೇ ವಾರ್ಷಿಕ ಘಟಿಕೋತ್ಸವದಲ್ಲಿ ಕರ್ನಾಟಕ ಸರ್ಕಾರ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ ಅವರು ಪದವಿ ಪ್ರದಾನ ಮಾಡಿದರು.

ಈ ಕಾರ್ಯಕ್ರಮದಲ್ಲಿ ಕ.ವಿ.ವಿಯ ಕುಲಪತಿಗಳಾದ ಪ್ರೊ. ಕೆ.ಬಿ. ಗುಡಸಿ, ಕುಲಸಚಿವರಾದ ಡಾ. ಎ.ಚನ್ನಪ್ಪ, ಮೌಲ್ಯಮಾಪನ ಕುಲಸಚಿವರಾದ ಪ್ರೊ. ಎನ್.ವೈ. ಮಟ್ಟಿಹಾಳ ಮುಂತಾದ ಗಣ್ಯರು ಉಪಸ್ಥಿತರಿದ್ದರು. ಇವರಿಗೆ ಕುಟುಂಬದವರು, ಊರಿನ ಗುರು-ಹಿರಿಯರು, ಶಿಕ್ಷಕರು, ಗೆಳೆಯರು, ಸಂಘ-ಸಂಸ್ಥೆಯವರು ಅಭಿನಂದಿಸಿದ್ದಾರೆ.

ಶ್ರೀ ಜ. ಮರುಳಸಿದ್ಧೇಶ್ವರ ದಾಸೋಹ ಮಂದಿರ ಉದ್ಘಾಟನಾ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಮೌಲ್ಯಗಳ ಸಂರಕ್ಷಣೆ ನಮ್ಮೆಲ್ಲರ ಗುರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ಆಧುನಿಕ ಕಾಲದಲ್ಲಿ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳು ಕಣ್ಮರೆಯಾಗುತ್ತಿವೆ. ಸತ್ಯ, ಧರ್ಮ, ನ್ಯಾಯ, ನೀತಿ ಪರಿಪಾಲಿಸಿ ಬಾಳಿದರೆ ಬದುಕು ಉಜ್ವಲಗೊಳ್ಳುತ್ತದೆ. ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳ ಸಂರಕ್ಷಣೆ ನಮ್ಮೆಲ್ಲರ ಗುರಿಯಾಗಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಬುಕ್ಕಾಂಬುಧಿ ಬೆಟ್ಟದ ಮೇಲೆ ನಿರ್ಮಿಸಿದ ಶ್ರೀ ಜಗದ್ಗುರು ಮರುಳಸಿದ್ಧೇಶ್ವರ ದಾಸೋಹ ಮಂದಿರ ಉದ್ಘಾಟನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಮಾಜದಲ್ಲಿ ಸ್ಥಾನ-ಮಾನಗಳು ಮತ್ತು ಆಸ್ತಿ-ಅಂತಸ್ತುಗಳು ಬದಲಾಗಬಹುದು. ಆದರೆ ಮಾನವೀಯ ಮೌಲ್ಯಗಳು ಮತ್ತು ಸಂಬಂಧಗಳು ಎಂದೆಂದಿಗೂ ಬದಲಾಗದಂತಿರಬೇಕು. ವೀರಶೈವ ಧರ್ಮದಲ್ಲಿರುವ ಆಧ್ಯಾತ್ಮದ ಸಂಪತ್ತು ಅಪಾರ. ಜಾತಿಗಿಂತ ಧರ್ಮ, ತತ್ವಕ್ಕಿಂತ ಆಚರಣೆ ಮುಖ್ಯವೆಂದ ವೀರಶೈವ ಧರ್ಮ ಸಕಲರಿಗೂ ಒಳಿತನ್ನೇ ಬಯಸಿದೆ. ಲಿಂ.ಶ್ರೀ ಉಜ್ಜಯಿನಿ ಸಿದ್ದಲಿಂಗ ಜಗದ್ಗುರುಗಳು ಮಾನವ ಕಲ್ಯಾಣಕ್ಕಾಗಿ ಕಠಿಣ ತಪಸ್ಸು ಮಾಡಿ ಭಕ್ತರ ಬಾಳಿಗೆ ಬೆಳಕು ತೋರಿದರು. ಅಂಥ ಮಹಿಮಾನ್ವಿತರು ನೆಲೆನಿಂತ ತಾಣದಲ್ಲಿ ಬರುವ ಭಕ್ತರಿಗೆ ಪೂಜೆ, ವಸ್ತಿ ಮತ್ತು ದಾಸೋಹ ಏರ್ಪಡಿಸಿ ಅನುಕೂಲ ಕಲ್ಪಿಸುವುದು ಟ್ರಸ್ಟಿನ ಮೂಲ ಗುರಿಯಾಗಿದೆ ಎಂದರು.



ತರೀಕೆರೆ ಕ್ಷೇತ್ರದ ಶಾಸಕ ಜಿ.ಹೆಚ್. ಶ್ರೀನಿವಾಸ್ ಮಾತನಾಡಿ, ಪುಣ್ಯ ಕ್ಷೇತ್ರಗಳ ದರ್ಶನದಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ಪ್ರಾಪ್ತಿಯಾಗುತ್ತದೆ. ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ದಲಿಂಗ ಜಗದ್ಗುರುಗಳ ತಪಸ್ಸಿನಿಂದ ಈ ಕ್ಷೇತ್ರ ಅತ್ಯಂತ ಪವಿತ್ರವಾಗಿದೆ ಎಂದರು.

ನೇತೃತ್ವ ವಹಿಸಿದ ಎಡೆಯೂರು ರೇಣುಕ ಶಿವಾಚಾರ್ಯರು ಹಾಗೂ ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಮಾತನಾಡಿ, ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನವಿದೆ. ಶಿವಪಥವನ್ನು ಅರಿಯಲು ಗುರುಪಥವೇ ಮೊದಲೆಂದು ಬಣ್ಣಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಮಾತನಾಡಿ, ಭಾರತೀಯ ಉತ್ಕೃಷ್ಟ ಸಂಸ್ಕೃತಿಗೆ ನಾಡಿನ ಆಚಾರ್ಯರ ಮಹಾತ್ಮರ ಕೊಡುಗೆ ಅಪಾರ. ಲಿಂ.ಶ್ರೀ ಉಜ್ಜಯಿನಿ ಸಿದ್ದಲಿಂಗ ಜಗದ್ಗುರುಗಳು ತಪಗೈದ ಈ ಕ್ಷೇತ್ರ ಶ್ರೀ ರಂಭಾಪುರಿ ಜಗದ್ಗುರುಗಳ ಮಾರ್ಗದರ್ಶನದಲ್ಲಿ ಅಭಿವೃದ್ಧಿಯಾಗುತ್ತಿರುವುದು ಸಂತೋಷದ ಸಂಗತಿ. ಸಂಸ್ಕೃತಿಯ ಮೇಲೆ ಬಹಳಷ್ಟು ದುಷ್ಪರಿಣಾಮ ಉಂಟಾಗುತ್ತಿರುವ ಇಂದಿನ ಸಂದರ್ಭದಲ್ಲಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸಬೇಕೆಂದರು.

ಈ ಪವಿತ್ರ ಸಮಾರಂಭದಲ್ಲಿ ಮಳಲಿ ಡಾ.ನಾಗಭೂಷಣ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶ್ರೀಗಳು, ಚಿಕ್ಕಮಗಳೂರು ಚಂದ್ರಶೇಖರ ಶ್ರೀಗಳು, ಬೀರೂರು ರುದ್ರಮುನಿ ಶ್ರೀಗಳು, ನಂದೀಪುರ ನಂದೀಶ್ವರ ಶ್ರೀಗಳು, ಹಣ್ಣೆ ಮಠದ ಮರುಳಸಿದ್ಧ ಪಂಡಿತಾರಾಧ್ಯ ಶ್ರೀಗಳು, ಕಡೆನಂದಿಹಳ್ಳಿ ರೇವಣಸಿದ್ಧೇಶ್ವರ ಶ್ರೀಗಳು, ಆಂಧ್ರದ ಪಾಲ್ತೂರು ಚನ್ನವೀರ ಶ್ರೀಗಳು, ಕಾರ್ಜುವಳ್ಳಿ ಸದಾಶಿವ ಶ್ರೀಗಳು, ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶ್ರೀಗಳು, ಚನ್ನಗಿರಿ ಕೇದಾರ ಶಿವಶಾಂತವೀರ ಶ್ರೀಗಳು, ಹಾರನಹಳ್ಳಿ ಶಿವಯೋಗಿ ಶ್ರೀಗಳು, ಹಂಪಸಾಗರದ ಶಿವಲಿಂಗ ರುದ್ರಮುನಿ ಶ್ರೀಗಳು, ಕಲಾದಗಿ ಗಂಗಾಧರ ಶ್ರೀಗಳು ಉಪಸ್ಥಿತರಿದ್ದರು.

ಕೆ.ಆರ್. ಆನಂದಪ್ಪ, ಎಂ.ಕೃಷ್ಣಮೂರ್ತಿ, ಚಿಕ್ಕಾನವಂಗಲದ ವಿರುಪಾಕ್ಷಪ್ಪ, ಶಿವಮೊಗ್ಗದ ಉಮೇಶಾರಾಧ್ಯರು ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು. ಕಟ್ಟಡ ನಿರ್ಮಾಣಕ್ಕೆ ವಿಶೇಷವಾಗಿ ಶ್ರಮಿಸಿದ ಬಿ.ಎಸ್. ಭಾಗ್ಯ, ಬಿ.ವಿ.ಪ್ರತಿಭಾ ಹಾಗೂ ಎಂ.ಸಿ. ಶಾಂತ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಕಟ್ಟಡ ನಿರ್ಮಾಣ ಮಾಡಿ ಅನ್ನ ದಾಸೋಹ ಸೇವೆಯನ್ನು ನಿರ್ವಹಿಸಿದ ಬೀರೂರಿನ ನವೀನ ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ಟ್ರಸ್ಟಿನ ಕಾರ್ಯದರ್ಶಿ ಹೆಚ್.ಪಿ.ಸುರೇಶ ಹಾಗೂ ಟ್ರಸ್ಟಿನ ಎಲ್ಲಾ ಪದಾಧಿಕಾರಿಗಳು ಮಹಿಳಾ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ಬಿ.ವಿ. ಪ್ರತಿಭಾ ಸ್ವಾಗತಿಸಿದರು. ಹುಣಸಘಟ್ಟದ ಗುರುಮೂರ್ತಿ ಶಿವಾಚಾರ್ಯರು ನಿರೂಪಿಸಿದರು.



ಗದಗ ತಾಲೂಕಿನ ಹುಲಕೋಟಿ ಗ್ರಾಮದ ರೈತ ಸಂಪರ್ಕ ಕೇಂದ್ರದ ಆವರಣದಲ್ಲಿ ಗೋದಾಮು ನಿರ್ಮಾಣ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಅವರು ಬಿತ್ತನೆ ಬೀಜ ಹಾಗೂ ಕೃಷಿ ಪರಿಕರಗಳನ್ನು ರೈತರಿಗೆ ವಿತರಿಸಿದರು.

## ಸಾಮಾನ್ಯ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಾ ವಾಲ್ಮೀಕಿ ಸಮಾಜದ ಸಾಮಾನ್ಯ ಸಭೆ ಸೇರಿದಂತೆ ಮಹರ್ಷಿ ವಾಲ್ಮೀಕಿ ಶ್ರೀಗಳ ಜಯಂತ್ಯುತ್ಸವ ಆಚರಣೆ ಕುರಿತು ಮತ್ತು ಸಮಾಜದ ಪ್ರಗತಿಯ ವಿಚಾರಧಾರೆಯಾಗಿ ಸೆ 29ರಂದು ಬೆಳಿಗ್ಗೆ 11ಕ್ಕೆ ಗಜೇಂದ್ರಗಡ ರಸ್ತೆಯಲ್ಲಿರುವ ವಾಲ್ಮೀಕಿ ಸಮುದಾಯ ಭವನದಲ್ಲಿ ಸಾಮಾನ್ಯ ಸಭೆಯನ್ನು ಆಯೋಜಿಸಲಾಗಿದೆ.

ಸಭೆಗೆ ಸಂಘದ ಪದಾಧಿಕಾರಿಗಳು ಹಾಗೂ ಸಮುದಾಯದ ನಾಗರಿಕರು ಆಗಮಿಸಿ ಸಲಹೆ-ಸೂಚನೆಗಳನ್ನು ನೀಡಬೇಕು ಎಂದು ತಾಲೂಕಾಧ್ಯಕ್ಷ ಬಸವರಾಜ ತಳವಾರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಕನ್ನಡ ಜ್ಯೋತಿ ರಥವನ್ನು ಅದ್ದೂರಿಯಾಗಿ ಸ್ವಾಗತಿಸಿದ ಕನ್ನಡಾಭಿಮಾನಿಗಳು

# ಲಕ್ಷ್ಮೇಶ್ವರ ಪಟ್ಟಣಕ್ಕೆ ಕನ್ನಡ ರಥ

■ ವಿಜಯಸಾಕ್ಷಿ ಸುದ್ದಿ, ಗದಗ

ಮಂಡ್ಯದಲ್ಲಿ ಡಿಸೆಂಬರ್‌ನಲ್ಲಿ ಜರುಗಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಯುಕ್ತ ರಾಜ್ಯಾದ್ಯಂತ ಸಂಚರಿಸುತ್ತಿರುವ ಕನ್ನಡ ಜ್ಯೋತಿ ರಥವು, ಗದಗ ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣಕ್ಕೆ ಶನಿವಾರ ಆಗಮಿಸಿತು.

ಪಟ್ಟಣದ ಪಂಪ ವೃತ್ತಕ್ಕೆ ಆಗಮಿಸುತ್ತಿದ್ದಂತೆ ತಾಲೂಕಾಡಳಿತ ಲಕ್ಷ್ಮೇಶ್ವರ, ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು, ವಿವಿಧ ಕನ್ನಡಪರ ಸಂಘಟನೆ ಹಾಗೂ ಸಮಸ್ತ ಪಟ್ಟಣದ ಜನತೆ ಬರಮಾಡಿಕೊಂಡು ತಾಯಿ ಭುವನೇಶ್ವರಿ ಮೂರ್ತಿಗೆ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶಾಸಕ ಚಂದ್ರು ಲಮಾಣಿ ಹಾಗೂ ಮಾಜಿ ಶಾಸಕ ಜಿ.ಎಮ್. ಮಹಾಂತಶೆಟ್ಟರ ಮಾತನಾಡಿ, ಕನ್ನಡ ಭಾಷೆ ಬೆಳೆಸುವಲ್ಲಿ ಪ್ರತಿಯೊಬ್ಬರೂ ಕಂಕಣ ಬದ್ಧರಾಗಿ ನಿಲ್ಲಬೇಕು. ಕನ್ನಡ ನಾಡು ಉಳಿಸಿ-ಬೆಳೆಸುವ ಇಂತಹ ಕಾರ್ಯಕ್ರಮವು ಎಲ್ಲರಲ್ಲೂ ಸಂತೋಷ ಉಂಟು ಮಾಡಿದೆ. ಪ್ರತಿಯೊಬ್ಬರಲ್ಲಿ ನಾನೊಬ್ಬ ಕನ್ನಡಿಗ ಎಂಬ ಅಭಿಮಾನವಿರಬೇಕು. ಕನ್ನಡ ಹೋರಾಟಗಾರರನ್ನು ನೆನೆಯುವ ಮೂಲಕ ಅವರ ಆದರ್ಶ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.



ತಹಸೀಲ್ದಾರ ವಾಸುದೇವ ವಿ.ಸ್ವಾಮಿ, ಕಸಾಪ ತಾಲೂಕಾ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿದರು. ಮಂಡ್ಯ ಜಿಲ್ಲೆಯ ವಿಶೇಷತೆ ಸಾರುವ ರಥವು, ಕನ್ನಡ ನುಡಿ ಕಲಿಸುವ ತಾಯಿ ಭುವನೇಶ್ವರಿ, ಕಾವೇರಿ ಮಾತೆ, ಉಳುಮೆ ಮಾಡಲು ಸಿದ್ಧವಿರುವ ಎತ್ತುಗಳು ಮತ್ತು ರೈತ, ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಸರ್ ಎಂ. ವಿಶ್ವೇಶ್ವರಯ್ಯ ಅವರ ಸುಂದರ ಆಕೃತಿಗಳು ಜಿಲ್ಲೆಯ ಬಗ್ಗೆ ಚಿತ್ರಣ, ಜ್ಞಾನಪೀಠ ಪುರಸ್ಕೃತರ ಭಾವಚಿತ್ರಗಳನ್ನು ಒಳಗೊಂಡಿರುವುದು ವಿಶೇಷ ಆಕರ್ಷಣೆಯಾಗಿದೆ.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಷ ಆಡೂರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಸಿಡಿಪಿಓ ಮೃತ್ಯುಂಜಯ ಗುಡ್ಡದಅನ್ವೇರಿ, ಡಾ. ಪರಶುರಾಮ ಬಾರ್ಕಿ, ಬಸವರಾಜ ಬೆಂಡಿಗೇರಿ, ಮಂಜುನಾಥ ಚಾಕಲಬ್ಬಿ, ಎಸ್.ಬಿ. ಅಣ್ಣಿಗೇರಿ, ಪಿ.ಬಿ. ಕರಾಟೆ, ಸಿ.ಜಿ. ಹಿರೇಮಠ, ಶರಣು ಗೋಡಿ, ಮಹೇಶ ಕಲಘಟಗಿ, ಬಸವರಾಜ ಬಾಳೇಶ್ವರಮಠ ನೀಲಪ್ಪ ಹತ್ತಿ, ಅಗಡಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಪಟ್ಟಣದ ಶಾಲಾ-ಕಾಲೇಜು ವಿದ್ಯಾರ್ಥಿಗಳು, ವಿವಿಧ ಕನ್ನಡಪರ ಸಂಘಟನೆಗಳು ಹಾಗೂ ಮಹಿಳಾ ಸಂಘಟನೆಗಳ ಕಾರ್ಯಕರ್ತರು, ಕನ್ನಡಾಭಿಮಾನಿಗಳು ಇದ್ದರು.

ಜ್ಯೋತಿ ಕನ್ನಡ ರಥಯಾತ್ರೆ ಮೆರವಣಿಗೆ ಲಕ್ಷ್ಮೇಶರದ ಪಂಪ ವೃತ್ತದಿಂದ ಹಳೇ ಬಸ್ ಸ್ಟಾಂಡ್ ಕ್ರಾಸ್, ಮಾನ್ವಿ ಪೆಟ್ರೋಲ್ ಬಂಕ್, ಶಿಗ್ಲಿ ಕ್ರಾಸ್, ಹೊಸ ಬಸ್ ಸ್ಟಾಂಡ್ ಮುಂದೆ ಹಾಯ್ದು ಗದುಗಿನ ಅಗಸಿವರೆಗೂ ಸಾಗಿ ನಂತರ ಶಿರಹಟ್ಟಿ ತಾಲೂಕಿನ ಕಡೆ ಸಾಗಿತು. ಇದೇ ವೇಳೆ ಶಾಲಾ ವಿದ್ಯಾರ್ಥಿಗಳು ಅನೇಕ ಮಹನೀಯರ, ಹೋರಾಟಗಾರರ ವೇಷದಲ್ಲಿ ಗಮನ ಸೆಳೆದರು.

## ಪೋಷಣ ಅಭಿಯಾನದ ಸದುಪಯೋಗವಾಗಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರಲ್ಲಿ ಶಾಲಾ ಶಿಕ್ಷಣ ಇಲಾಖೆ, ರಾಜ್ಯ ಸರಕಾರ ಅಕ್ಷರ ದಾಸೋಹ ಮದ್ಯಾಹ್ನದ ಉಪಹಾರ ಯೋಜನೆಯಡಿ, ಅಜೀಂ ಪ್ರೇಮಜಿ ಫೌಂಡೇಷನ್ ಇವರ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳ ಪೌಷ್ಟಿಕತೆ ವೃದ್ಧಿಸಲು 2024-25ನೇ ಸಾಲಿನಲ್ಲಿ ರಾಜ್ಯದ ಎಲ್ಲ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ವಾರದ 6 ದಿನಗಳಲ್ಲಿ ಪೂರಕ ಆಹಾರಗಳಾದ ಮೊಟ್ಟೆ, ಶೇಂಗಾ ಚಿಕ್ಕಿ, ಬಾಳೆ ಹಣ್ಣು ವಿತರಿಸುವ ಕಾರ್ಯಕ್ರಮಕ್ಕೆ ಶಾಸಕ ಡಾ.ಚಂದ್ರು ಲಮಾಣಿ ಶನಿವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪೌಷ್ಟಿಕ ಆಹಾರ ಮಕ್ಕಳ ಬೌದ್ಧಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ. ಶಾಲೆಗಳಲ್ಲಿ ಪ್ರಾರಂಭಿಸಲಾಗಿರುವ ಪೋಷಣ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ



ಹೆಚ್.ಎನ್. ನಾಯಕ್ ಮಾತನಾಡಿ, ಮಕ್ಕಳು ಸರ್ಕಾರ ನೀಡುವ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮವಾಗಿ ವಿದ್ಯಾಭ್ಯಾಸ ಮಾಡಬೇಕೆಂದು ತಿಳಿಸಿದರು. ಪುರಸಭೆ ಸದಸ್ಯರಾದ ಪೂರ್ಣಿಮಾ ಪಾಟೀಲ್ ಮಾತನಾಡಿದರು. ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎಚ್.ಎಸ್. ರಾಮನಗೌಡ್ರ ಪ್ರಾಸ್ತಾವಿಕ ನುಡಿದರು.

ಕಾರ್ಯಕ್ರಮದಲ್ಲಿ ಎಸ್‌ಡಿ ಎಂಸಿ ಅಧ್ಯಕ್ಷ ಬಸವರಾಜ್ ಗೋಡಿ, ಬಿ.ಎಮ್. ಕುಂಬಾರ, ಡಿ.ಎನ್. ದೊಡ್ಡಮನಿ, ಸಿಆರ್‌ಪಿ ಸತೀಶ್ ಬೋಮಲೆ, ಎನ್.ಎ. ಮುಲ್ಲಾ, ಎಸ್.ಎಸ್. ಮುಳಗುಂದ, ಎಸ್.ಎಸ್. ಮಹಾಲಿಂಗಶೆಟ್ಟರ, ಇ.ಎಚ್. ಪೀಟರ್, ಸವಿತಾ ಬೋಮಲೆ, ಚೈತನ್ಯ ಮುದುಗಲ್, ಎಮ್.ಎನ್. ಭರಮಗೌಡ್ರ, ಎನ್.ಎನ್. ಶಿಗ್ಲಿ ಉಪಸ್ಥಿತರಿದ್ದರು. ಸಿಆರ್‌ಪಿ ಉಮೇಶ ನೇಕಾರ ಸ್ವಾಗತಿಸಿದರು, ಆರ್.ಬಿ. ಅಡರಕಟ್ಟಿ ನಿರೂಪಿಸಿದರು, ಡಿ.ಎನ್. ದೊಡ್ಮನಿ ವಂದಿಸಿದರು.

## ರಿಯಾಯತಿ ದರದಲ್ಲಿ ಕಡಲೆ ಬೀಜ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸರಕಾರ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆಯ ಬೀಜಗಳನ್ನು ಪ್ರತಿ ವರ್ಷ ನೀಡುತ್ತಿದ್ದು, ರೈತರು ಬೀಜವನ್ನು ಪಡೆದುಕೊಂಡು ಸದುಪಯೋಗ ಪಡೆದುಕೊಳ್ಳಬೇಕು ಎಂದು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಹೇಳಿದರು.

ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ 2ರ ಆಶ್ರಯದಲ್ಲಿ ಸರಕಾರ ರಿಯಾಯತಿ ದರದಲ್ಲಿ ರೈತರಿಗೆ ನೀಡುತ್ತಿರುವ ಹಿಂಗಾರು ಹಂಗಾಮಿನ ಕಡಲೆ ಮತ್ತು ಜೋಳದ ಬೀಜವನ್ನು ವಿತರಿಸಿ ಅವರು ಮಾತನಾಡಿದರು.

ಸರಕಾರ ರೈತರ ಅಭಿವೃದ್ಧಿಗಾಗಿ ಬಿತ್ತನೆ ಬೀಜ, ಗೊಬ್ಬರ, ಕ್ರಿಮಿನಾಶಕ ಸೇರಿದಂತೆ ರೈತರಿಗೆ ಅನುಕೂಲವಾಗುವ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳನ್ನು ಪ್ರಾಮಾಣಿಕವಾಗಿ ಸದುಪಯೋಗಪಡಿಸಿಕೊಳ್ಳಬೇಕು. ಈಗಾಗಲೇ ಈ ಸಹಕಾರಿ ಸಂಘವು ಪ್ರಾಮಾಣಿಕವಾದ ವ್ಯವಹಾರ ಮಾಡಿರುವ ಪರಿಣಾಮವಾಗಿ ಸರಕಾರ ಅತ್ಯುತ್ತಮ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ಮಾತನಾಡಿ, ನಮ್ಮ ಸಂಘದ ಪ್ರಾಮಾಣಿಕ ವ್ಯವಹಾರದಿಂದ ಸರಕಾರ ಪ್ರತಿ ವರ್ಷ ರಿಯಾಯತಿ ದರದ ಬಿತ್ತನೆ ಬೀಜ ವಿತರಿಸುತ್ತಿದೆ. ರೈತರು ಸರಿಯಾದ ದಾಖಲೆಗಳನ್ನು ನೀಡಿ ಬೀಜವನ್ನು ಪಡೆದುಕೊಳ್ಳಬೇಕು ಎಂದು ವಿನಂತಿಸಿಕೊಂಡರು.

ಈಶ್ವರಪ್ಪ ಕುಂಬಾರ, ಅಜ್ಜಪ್ಪಗೌಡ ಪಾಟೀಲ ಮಾತನಾಡಿದರು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆಣಕಲ್ಲ ಬೀಜ ಖರೀದಿಗಾಗಿ ಬೇಕಾಗುವ ದಾಖಲೆಗಳ ಕುರಿತು ಮಾಹಿತಿ ನೀಡಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸಂಘದ ಉಪಾಧ್ಯಕ್ಷ ರುದ್ರಪ್ಪ ವಡ್ಡರ, ನಿರ್ದೇಶಕರು ವೇದಿಕೆಯಲ್ಲಿದ್ದರು. ಪ್ರವೀಣ ಕಲಾಲ ನಿರೂಪಿಸಿ ವಂದಿಸಿದರು.

### ಮೊಹರೆ ಹಣಮಂತರಾಯ ಪ್ರಶಸ್ತಿ ಪುರಸ್ಕೃತ ಕಿದಿಯೂರರಿಗೆ ಸನ್ಮಾನ

## ಪ್ರಶಸ್ತಿಯಿಂದ ಜಿಲ್ಲೆಯ ಘನತೆ ಹೆಚ್ಚಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಕಳೆದ ಐದು ದಶಕಗಳಿಂದ ಸ್ವಂತ ಮುದ್ರಣ ಯಂತ್ರದಲ್ಲಿ ಮುದ್ರಣಗೊಂಡು ಪಕ್ಷಾತೀತವಾಗಿ ಸುದ್ದಿಗಳನ್ನು ಬಿತ್ತರಿಸುತ್ತಿರುವ ನವೋದಯ ಪತ್ರಿಕೆ ಹಾಗೂ ಸಂಪಾದಕರಾದ ರಾಜೀವಲೋಚನ ಕಿದಿಯೂರ ಅವರಿಗೆ ಮೊಹರೆ ಹಣಮಂತರಾಯ ಪ್ರಶಸ್ತಿ ನೀಡಿರುವುದು ಪ್ರಶಸ್ತಿಯ ಘನತೆ ಹೆಚ್ಚಿಸಿದೆ ಎಂದು ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಬಸವಣ್ಣಯ್ಯ ಹಿರೇಮಠ ಹೇಳಿದರು.

ರಾಜ್ಯ ಸರಕಾರದಿಂದ ಮೊಹರೆ ಹಣಮಂತರಾಯ ಪ್ರಶಸ್ತಿ ಪುರಸ್ಕೃತ ನವೋದಯ ಪತ್ರಿಕೆಯ ಸಂಪಾದಕ ರಾಜೀವಲೋಚನ ಕಿದಿಯೂರ ಅವರನ್ನು ಅವರ ನಿವಾಸದಲ್ಲಿ ಸನ್ಮಾನಿಸಿ ಮಾತನಾಡಿದರು.

ಗದಗ-ಬೆಟಗೇರಿ ಅವಳಿ ನಗರದಲ್ಲಿ 15-02-1976ರಂದು ಸಣ್ಣ ಪ್ರಮಾಣದಲ್ಲಿ ಅಚ್ಚುಮೊಳೆಯ ಮುದ್ರಣಯಂತ್ರದಲ್ಲಿ ಆರಂಭಗೊಂಡ ನವೋದಯ ಪತ್ರಿಕೆ ಈಗ ವ್ಯವಸ್ಥಾಪಕ ಸಂಪಾದಕರಾದ ದೀಪಕ್ ಕಿದಿಯೂರ ಅವರ ನೇತೃತ್ವದಲ್ಲಿ ಬಣ್ಣದ ಪುಟಗಳಲ್ಲಿ ಮುದ್ರಣಗೊಳ್ಳುತ್ತಿದೆ. ಉತ್ತರ ಕರ್ನಾಟಕದ ಮನೆ ಮಾತಾಗಿರುವ ಪತ್ರಿಕೆ ಕನ್ನಡ ಭಾಷೆ, ಸಾಹಿತ್ಯ, ಪರಂಪರೆ, ಸಂಸ್ಕೃತಿಯ ಪ್ರತೀಕವಾಗಿ ಜನಮನ ಗೆದ್ದಿದೆ ಎಂದರು.



ಗದಗ ಜಿಲ್ಲಾ ಬಿಜೆಪಿ ಮುಖಂಡ ಮಹೇಶ ದಾಸರ ಮಾತನಾಡಿ, ಗದಗ ಜಿಲ್ಲೆಯ ಘನತೆ, ಪತ್ರಿಕಾ ಮೌಲ್ಯವನ್ನು ಕಳೆದ 50 ವರ್ಷಗಳಿಂದ ಕಾಪಾಡಿಕೊಂಡು ಬಂದಿರುವ ನವೋದಯ ಪತ್ರಿಕೆಯ ಸಂಪಾದಕರಿಗೆ ಪ್ರಶಸ್ತಿ ದೊರೆತಿರುವುದು ಗದಗ ಜನತೆಗೆ ಹೆಮ್ಮೆ ಮೂಡಿಸಿದೆ ಎಂದರು.

ಕರವೇ ಪ್ರವೀಣ ಶೆಟ್ಟಿ ಬಣದ ವೆಂಕಟೇಶ ಆರ್.ಬೇಲೂರ ಮಾತನಾಡಿ, ಕನ್ನಡ ಭಾಷೆಯ ಉಳಿವು ಹಾಗೂ ಬೆಳವಣಿಗೆಗಾಗಿ ಶ್ರಮಿಸುತ್ತ, ಕಳೆದ ಅರ್ಧ ಶತಮಾನದಿಂದಲೂ ನಿರಂತರವಾಗಿ ಕರ್ನಾಟಕದ ಜನತೆಗೆ ಅರಿವು ಮೂಡಿಸುತ್ತಿರುವ ನವೋದಯ ಪತ್ರಿಕೆಯ ಸೇವೆಯನ್ನು ಗುರುತಿಸಿ ಸರಕಾರ ಮೊಹರೆ ಹಣಮಂತರಾಯ ಪ್ರಶಸ್ತಿಯನ್ನು ಸಂಪಾದಕರಾದ ರಾಜೀವಲೋಚನ ಕಿದಿಯೂರರಿಗೆ ನೀಡಿರುವುದು ಸ್ತುತ್ಯಾರ್ಹ. ಕನ್ನಡಪರ ಸಂಘಟನೆಗಳ ಹೋರಾಟಗಳಿಗೆ ಸ್ಫೂರ್ತಿ ತುಂಬಿದ ಪತ್ರಿಕೆಯಾಗಿದೆ ಎಂದರು.

ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನ, ನಾಗಾವಿ, ವೆಂಕಟೇಶ ದಾಸರ ಅಭಿಮಾನಿಗಳ ಬಳಗ, ಕರ್ನಾಟಕ ರಾಜ್ಯ ರೈಲ್ವೆ ಅಭಿವೃದ್ಧಿ ಹೋರಾಟ ಸಮಿತಿ, ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣ, ರಾಷ್ಟ್ರೀಯ ಅಹಿಂದ ಸಂಘಟನೆ, ಮುಂಡರಗಿ ತಾಲೂಕು ಸಾರ್ವಜನಿಕ ಹೋರಾಟ ವೇದಿಕೆಯ ಮುಖಂಡರು, ಪದಾಧಿಕಾರಿಗಳು ಮೊಹರೆ ಹಣಮಂತರಾಯ ಪ್ರಶಸ್ತಿ ಪುರಸ್ಕೃತ ರಾಜೀವಲೋಚನ ಕಿದಿಯೂರ ಅವರನ್ನು ಸನ್ಮಾನಿಸಿ, ಗೌರವಿಸಿದರು.

ಕರವೇ ಪ್ರವೀಣಶೆಟ್ಟಿ ಬಣದ ಕಾನೂನು ಸಲಹೆಗಾರರಾದ ಮಂಜುನಾಥ ಶಾಂತಗೇರಿ, ಗದಗ ತಾಲೂಕು ಅಧ್ಯಕ್ಷ ಹನಮಂತಸಾ ಶಿದ್ಲಿಂಗ್, ರಾಷ್ಟ್ರೀಯ ಅಹಿಂದ ಸಂಘಟನೆಚು ಜೋಸೆಫ್ ಓದೋಜಿ, ಬಾಬಾಜಾನ ಡಾಲಾಯತ ಮುಂತಾದವರು ಉಪಸ್ಥಿತರಿದ್ದರು.

ಅಹಿಂದ ರಾಷ್ಟ್ರೀಯ ಸಂಘಟನೆಯ ರಾಜ್ಯ ಕಾರ್ಯದರ್ಶಿ, ನ್ಯಾಯವಾದಿ ವಿಲಾಸ ಕೊಪ್ಪಳ ಮಾತನಾಡಿ, ಇಂದಿನ ಆಧುನಿಕ, ಸ್ಪರ್ಧಾತ್ಮಕ ದಿನಗಳಲ್ಲಿ ಬಹುತೇಕ ಪತ್ರಿಕೆಗಳು ಕಮರ್ಷಿಯಲ್ ಆಗಿರುವಾಗ ಯಾವುದೇ ಫಲಾಪೇಕ್ಷೆ ಇಲ್ಲದೇ, ರಾಜ್ಯದಲ್ಲಿ ನಡೆದಿರುವ ಕಾರ್ಯಕ್ರಮಗಳು, ಸುದ್ದಿಗಳನ್ನು ಅಚ್ಚುಕಟ್ಟಾಗಿ ನೀಡುತ್ತಿರುವ ನವೋದಯ ಪತ್ರಿಕೆ ಜನಮೆಚ್ಚಿದ ಪತ್ರಿಕೆಯಾಗಿದೆ ಎಂದರು.

### ರೇಬೀಸ್ ರೋಗದ ಕುರಿತು ಡಾ. ಎನ್.ಎಚ್. ಓಲೇಕಾರ ಸಲಹೆ

## ರೇಬೀಸ್ ರೋಗವನ್ನು ನಿರ್ಲಕ್ಷಿಸದಿರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಕುಂದ್ರಳ್ಳಿ ತಾಂಡಾ ಮತ್ತು ಗ್ರಾಮದಲ್ಲಿ ಇತ್ತೀಚೆಗೆ ಹುಚ್ಚು ನಾಯಿಗಳ ಹಾವಳಿಯಿಂದ ಅನೇಕ ಜನರು ಗಾಯಗೊಳ್ಳುತ್ತಿರುವ ಘಟನೆಗಳು ನಡೆಯುತ್ತಿವೆ. ಇದರಿಂದ ಜನರು ಬೆಚ್ಚಿಬೀಳುವಂತಾಗಿದ್ದು, ಈ ಹಿನ್ನೆಲೆಯಲ್ಲಿ ಜಿ.ಪಂ ಗದಗ, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಗದಗ ಇವರ ಆಶ್ರಯದಲ್ಲಿ ತಾಲೂಕಾ ಪಶುವೈದ್ಯಾಧಿಕಾರಿ ಡಾ. ಎನ್.ಎಚ್. ಓಲೇಕಾರ ಮತ್ತು ಪಶುವೈದ್ಯಾಧಿಕಾರಿ ಡಾ.ಏಕನಾಥ ಮುಧೋಳಕರ ಅವರ ನೇತೃತ್ವದ ತಂಡ ಕುಂದ್ರಳ್ಳಿ ಗ್ರಾಮ ಮತ್ತು ತಾಂಡಾಗಳಿಗೆ ಭೇಟಿ ನೀಡಿ ರೇಬೀಸ್ ರೋಗದ ಬಗ್ಗೆ ಅರಿವು ಮೂಡಿಸುವದು, ರೇಬೀಸ್ ಲಸಿಕೆ, ಚುಚ್ಚುಮದ್ದು ಹಾಕುವ ಕಾರ್ಯವನ್ನು ಶನಿವಾರ ನಡೆಸಿದರು.

ಅಲ್ಲಲ್ಲಿ ಜನರನ್ನು ಸೇರಿಸಿ ಹುಚ್ಚು ನಾಯಿಯ ಲಕ್ಷಣಗಳು ಮತ್ತು ರೇಬೀಸ್ ರೋಗದ ಲಕ್ಷಣಗಳ ಕುರಿತು ಸಭೆಗಳನ್ನು ನಡೆಸಿ ಮಾಹಿತಿ ನೀಡಿದರು.



ರೇಬಿಸ್ ಲಸಿಕೆಯನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕು, ಹುಚ್ಚು ನಾಯಿ ಕಡಿತಕ್ಕೊಳಗಾದ ವ್ಯಕ್ತಿ ಅಥವಾ ದನಕರುಗಳಿಗೆ 1, 7, 14 ಮತ್ತು 28ನೇ ದಿನಗಳಿಂದು ತಪ್ಪದೆ ರೇಬೀಸ್ ಲಸಿಕೆ ಹಾಕಿಸಬೇಕು. ರೋಗದ ಬಗ್ಗೆ ಜನರು ನಿರ್ಲಕ್ಷ್ಯ ವಹಿಸದೆ ಸರಿಯಾದ ಚಿಕಿತ್ಸೆ ಪಡೆದುಕೊಳ್ಳುವದರ ಜೊತೆಗೆ ಹುಚ್ಚು ನಾಯಿಗಳು ಗ್ರಾಮದಲ್ಲಿ ಕಂಡು ಬಂದರೆ ಅದಕ್ಕೆ ಸೂಕ್ತ ಕ್ರಮಗಳನ್ನು ಅನುಸರಿಸುವಂತೆ ಡಾ. ಎನ್.ಎಚ್. ಓಲೇಕಾರ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಡಾ. ಎನ್. ಎಚ್. ಓಲೇಕಾರ ಮಾತನಾಡಿ, ಕುಂದ್ರಳ್ಳಿ ಭಾಗದಲ್ಲಿ ಗುಡ್ಡುಗಾಡು ಮತ್ತು ಅರಣ್ಯ ಪ್ರದೇಶಗಳಿಂದ ಬರುವ ತೋಳ ಮತ್ತು ನರಿಗಳು ನಾಯಿಗಳಿಗೆ ಕಚ್ಚುವದರಿಂದ ಅವುಗಳಿಗೆ ಹುಚ್ಚು ರೋಗ ಉಂಟಾಗುತ್ತದೆ. ಅವುಗಳು ಮತ್ತೆ ಇತರೆ ನಾಯಿಗಳಿಗೆ ಕಚ್ಚುವದರಿಂದ ಇದು ಹೆಚ್ಚುತ್ತಾ ಹೋಗುತ್ತದೆ. ಇವುಗಳು ಮನುಷ್ಯನಿಗೆ ಕಚ್ಚಿದಾಗ ರೇಬೀಸ್ ರೋಗ ಬರುತ್ತಿದ್ದು, ರೇಬೀಸ್ ವೈರಾಣುವಿನಿಂದ ಮತ್ತು ಹುಚ್ಚು ಪ್ರಾಣಿಗಳ ಕಡಿತದಿಂದ ಹರಡುವ ಒಂದು ಮಾರಣಾಂತಿಕ ರೋಗವಾಗಿದೆ. ಈ ರೋಗಕ್ಕೆ ತಕ್ಷಣದಲ್ಲಿ ಚಿಕಿತ್ಸೆ ದೊರೆಯದಿದ್ದಲ್ಲಿ ರೇಬೀಸ್‌ನಿಂದ ಸಾವು ಸಂಭವಿಸುತ್ತದೆ ಎಂದು ವಿವರಿಸಿದರು.

ರೇಬೀಸ್‌ನಿಂದ ನರಳುತ್ತಿರುವ ಪ್ರಾಣಿಗಳು ಜನರಿಗೆ ಕಚ್ಚಿದಾಗ ವೈರಾಣುಗಳು ದೇಹದೊಳಗೆ ಪ್ರವೇಶಿಸಿ ರೇಬೀಸ್ ರೋಗ ಉಂಟು ಮಾಡುತ್ತವೆ. ಗ್ರಾಮದಲ್ಲಿ ಅನೇಕ ದಿನಗಳಿಂದ ಇಂತಹ ಘಟನೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಜನರಲ್ಲಿ ಈ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಇಲಾಖೆ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದರು.

ಈ ಸಂದರ್ಭದಲ್ಲಿ ಪಶುವೈದ್ಯಾಧಿಕಾರಿ ಡಾ.ಏಕನಾಥ ಮುಧೋಳಕರ, ಗ್ರಾ.ಪಂ ಅಧ್ಯಕ್ಷೆ ಶಾಂತವ್ವ ಹಡಪದ, ಮಂಜುನಾಥ ಕಳಸದ, ರುದ್ರಯ್ಯ ಶೀಲವಂತರಮಠ, ಹಾಲಪ್ಪ ಹಳ್ಳಿಕೇರಿ, ಪರಮೇಶ ಹಂಗನಕಟ್ಟಿ, ಮಂಜುನಾಥ ಗೌರಿ, ಕಾರ್ಯದರ್ಶಿ ಸುರೇಶ ಹಡಪದ ಹಾಗೂ ಪಶು ವೈದ್ಯಕೀಯ ಇಲಾಖೆ ಸಿಬ್ಬಂದಿಗಳು, ಗ್ರಾ.ಪಂ ಸದಸ್ಯರು, ಆಶಾ ಕಾರ್ಯಕರ್ತೆಯರು, ಗ್ರಾಮಸ್ಥರು ಇದ್ದರು.

## ಕರಾಟೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ತೋಂಟದ ಸಿದ್ಧೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿನಿ ಶ್ರೇಯಾ ಮೇಟಿ ಕರಾಟೆ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಇತ್ತೀಚೆಗೆ ತಾಲೂಕಿನ ಹುಲಕೋಟಿ ಗ್ರಾಮದ ಸ್ವಾಮಿ ವಿವೇಕಾನಂದ ಪದವಿಪೂರ್ವ ಕಾಲೇಜಿನಲ್ಲಿ ಜರುಗಿದ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಉನ್ನತ ಸಾಧನೆ ತೋರಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಎಸ್.ಎಸ್. ಪಟ್ಟಣಶೆಟ್ಟರ, ಕಾಲೇಜಿನ ಪ್ರಾಚಾರ್ಯರಾದ ವೈ.ಎಸ್. ಮತ್ತೂರ, ಕೊಟ್ರೇಶ ಮೆಣಸಿನಕಾಯಿ ಸೇರಿದಂತೆ ಕಾಲೇಜಿನ ಉಪನ್ಯಾಸಕರು ವಿದ್ಯಾರ್ಥಿನಿಗೆ ಅಭಿನಂದನೆ ಸಲ್ಲಿಸಿದ್ದಾರೆ.


## ಗ್ರಾಮ ಪಂಚಾಯತ ಕಾರ್ಯಾಲಯ, ನಾಗವಿ

ತಾಲೂಕ :-ಗದಗ ಜಿಲ್ಲಾ:-ಗದಗ

ಸಂ.ಗ್ರಾ .ಪಂಹಾ/ಮ.ಗಾಂ.ರಾ.ಗಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-18/09/2024

-: ದರಪಟ್ಟಿ ಪ್ರಕಟಣೆ :-

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ನಾಗಾವಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ .ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ನಾಗಾವಿ ಗಾಥಮದ ಸರಕಾರಿ ಹಿರಿಯ ಪಾಥಮೀಕ ಶಾಲೆ ಆಟದ ಮೈದಾನ ಅಭಿವೃದಿಪಡಿಸುವುದು | 160804 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 02 | ನಾಗಾವಿ ಗಾಥಮದ ಸರಕಾರಿ ಕೀರಿಯ ಪಾಥಮೀಕ ಶಾಲೆಯಲಿ ಶೌಚಾಯಲ ನಿರ್ಮಾಣ | 137165 | 500 | |
| 03 | ನಾಗಾವಿ ಗಾಥಮದ ದಿ, ವಿರುಪಾಕ್ಷಪ್ಪಸೋ ಚಿಂಚಲಿ ಇವರು ಉನತಿಕ್ಕರಿಸಿದ ಸರಕಾರಿ ಪೌಢ ಶಾಲೆಯ ಆಟದ ಮೈದಾನ ಅಬಿವೃದಿಪಡಿ | 169707 | 500 | |
| 04 | ನಾಗಾವಿ ಗಾಥಮದ ಸರಕಾರಿ ಹಿರಿಯ ಪಾಥಮೀಕ ಶಾಲೆ ಕಂಪೌಡ ನಿರ್ಮಾಣ | 173685 | 500 | |
| 05 | ನಾಗಾವಿ ಗಾಥಮದ ದಿ, ಶ್ರೀ ವಿರುಪಾಕ್ಷಪ್ಪಸೋ ಚಿಂಚಲಿ ಇವರು ಉನತಿಕ್ಕರಿಸಿದ ಸರಕಾರಿ ಪೌಢ ಶಾಲೆಯ ಹೆಣ್ಣುಮಕಳ ಶೌಚಾಯಲ ನಿರ್ಮಾಣ | 137165 | 500 | |
| 06 | ನಾಗಾವಿ ಗಾಥಮದ ವಾಲ್ಮೀಕಿ ಸಮುದಾಯ ಭವನದಿಂದಾ ಹಿಂದೂ ಸಶಾನದವರಿಗೆ ಸಿ ಸಿ ರಸ್ತೆ ನಿರ್ಮಾಣ | 114867 | 500 | |
| 07 | ನಾಗಾವಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಡುಗೆ ಕೋಣೆ ನಿರ್ಮಾಣ. | 467371 | 500 | |
| 08 | ನಾಗಾವಿ ಗ್ರಾಮದ ಹೊಸ ಸರಕಾರಿ ಪೌಢಶಾಲೆಯಲ್ಲಿ ಭೋಜನಾಲಯ ನಿರ್ಮಾಣ | 456041 | 500 | |

*ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;-01/10/2024 ರಿಂದ 10/10/2024 ರವರೆಗೆ ,ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;-14-10-2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-15-10-2024 ರ ಮಧ್ಯಾಹ್ನ 3.00ಗಂಟೆ*

*ನಿಬಂಧನೆಗಳು*

1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾ ಮ ಪಂಚಾಯತ ನಾಗಾವಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯತಿ ನಾಗಾವಿ

ಅಧ್ಯಕ್ಷರು
ಗ್ರಾಮ ಪಂಚಾಯತಿ ನಾಗಾವಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka